ವಿಜಯಪುರ | ಸಂಪುಟ 04 | ಸಂಚಿಕೆ 068 | ಪುಟ 04 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಏಪ್ರಿಲ್, 30, 2026

"ಬಾಲ್ಯವಿವಾಹವು ಶಿಕ್ಷಾರ್ಹ ಅಪರಾಧವಾಗಿದ್ದು, ಸಾರ್ವಜನಿಕರು ತಮ್ಮ ಆಸುಪಾಸಿನಲ್ಲಿ ಇಂತಹ ಘಟನೆಗಳು ನಡೆಯುತ್ತಿದ್ದರೆ ತಕ್ಷಣವೇ ಸಂಬಂಧಪಟ್ಟ ಇಲಾಖೆ ಅಥ-ವಾ ಮಕ್ಕಳ ಸಹಾಯವಾಣಿಗೆ ಮಾಹಿತಿ ನೀಡಬೇಕು."



■ ಡಾ. ಆನಂದ್ ಕೆ
ಜಿಲ್ಲಾಧಿಕಾರಿ, ವಿಜಯಪುರ

### ವಿಜಯಪುರದಲ್ಲಿ ನಡೆದ ಮಾದಕ ವಸ್ತು ನಿಯಂತ್ರಣ ಕುರಿತ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಖಡಕ್ ಸೂಚನೆ

# ಮಾದಕ ವಸ್ತು ಸೇವನೆ ದುಷ್ಪರಿಣಾಮ ಕುರಿತು ಜಾಗೃತಿ ಮೂಡಿಸಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಯುವ ಜನಾಂಗ ದುಶ್ಚಟಗಳಿಗೆ ಬಲಿಯಾಗದಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ಮಾದಕ ವ್ಯಸನದಿಂದಾಗುವ ದುಷ್ಪರಿಣಾಮಗಳ ಕುರಿತು ವ್ಯಾಪಕವಾಗಿ ಜಾಗೃತಿ ಮೂಡಿಸಲು ಇಲಾಖಾಧಿಕಾ-ರಿಗಳು ಸಮನ್ವಯತೆ ಹಾಗೂ ಸಹಕಾರದಿಂದ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಸೂಚನೆ ನೀಡಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಮಾದಕ ವಸ್ತು ನಿಯಂತ್ರಣ ಕುರಿತ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲಾ ವಸತಿ ನಿಲಯಗಳ ಮೇಲೆ ನಿಗಾ ವಹಿಸಬೇಕು. ಶೈಕ್ಷಣಿಕ ಅವಧಿ ಮುಗಿದ ನಂತರ ಮಾದಕ ವಸ್ತು ನಿಯಂತ್ರಣ ಕುರಿತ ಅಭಿಯಾನ ಜಾಗೃತಿ ಹಮ್ಮಿಕೊಳ್ಳಬೇಕು ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ಅಧಿಕಾ-ರಿಗಳಿಗೆ ಸೂಚಿಸಿದರು. ಖಾಸಗಿ ಹಾಗೂ ಸರ್ಕಾರಿ ಶಾಲೆ ಸೇರಿದಂತೆ ಎಲ್ಲಾ ಶಾಲೆಗಳಲ್ಲಿ ಮಾದಕ ವಸ್ತು ನಿಯಂತ್ರಣ ಕೋಶ ರಚಿಸಿಕೊಳ್ಳಬೇಕು ಶಾಲಾ ಮಕ್ಕಳಿಂದ ಒಂದು ಸಮಿತಿ ರಚಿಸಿ ಮಕ್ಕಳಿಂದ ಕಾರ್ಯಕ್ರಮ ಮಾಡಿಸಿ. ಹಾಸ್ಟೆಲ್ ಕಮಿಟಿ, ಕ್ರೀಡಾ ಮತ್ತು ಸಾಂಸ್ಕೃತಿಕ ಸಮಿತಿ ಮಾದರಿಯಲ್ಲಿ ಮಾದಕ ವಸ್ತು ನಿಯಂತ್ರಣ ಕು-ರಿತ ಸಮಿತಿ ರಚಿಸಿಕೊಂಡು ವ್ಯಾಪಕ ತಿಳಿವಳಿಕೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾ-ರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಇಂಡಿ ಉಪ ವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ, ಜಿಪಂ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ, ಉಪ ಅರಣ್ಯ ಸಂರಕ್ಷಣಾಧಿಕಾರಿ ಮಲ್ಲಿಕಾರ್ಜುನ ಕುಸುನಾಳ, ಪಾಲಿಕೆಯ ಉಪ ಆಯುಕ್ತ ಮಹಾವೀರ ಬೋರಣ್ಣವರ, ಪ್ರಾದೇಶಿಕ ಸಾರಿಗೆ ಅಧಿಕಾರಿ ವಸೀಂ ಬಾಬಾ ಮುದ್ದೇಬಿಹಾಳ, ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಅಧಿಕಾರಿ ಪರಸುರಾಮ ಹಿಟ್ನಳ್ಳಿ, ಸಮಾಜ ಕಲ್ಯಾಣ ಇಲಾಖೆಯ ಮಂಟೂರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ದೀಪಾ ಕಾಳೆ, ಪೀಟರ್ ಅಲೆಕ್ಸಾಂಡರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



## ವಿವಿಧ ಇಲಾಖೆಗಳಿಗೆ ಕಟ್ಟುನಿಟ್ಟಿನ ಸೂಚನೆ

ಮಾದಕ ದ್ರವ್ಯಗಳ ನಿಯಂತ್ರಣ ಕೇವಲ ಪೊಲೀಸರಿಗೆ ಸೀಮಿತವಾಗದೆ, ಎಲ್ಲ ಇಲಾಖೆಗಳು ಸಮನ್ವಯದಿಂದ ಕೆಲಸ ಮಾಡುವಂತೆ ಜಿಲ್ಲಾಧಿಕಾ-ರಿಗಳು ಸೂಚಿಸಿದರು. ಅರಣ್ಯ ಇಲಾಖೆ, ಆರೋಗ್ಯ ಮತ್ತು ಶಿಕ್ಷಣ ಇಲಾಖೆ, ಔಷಧ ನಿಯಂತ್ರಣ ಇಲಾಖೆ, ಅಬಕಾರಿ ಇಲಾಖೆ ಅಧಿಕಾರಿಗಳು ಮಾದಕ ವಸ್ತು ಸೇವನೆಯ ವ್ಯಸನದಿಂದಾಗುವ ದುಷ್ಪರಿಣಾಮಗಳ ಕು-ರಿತ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

## ಕೋಟ್ಪಾ ಕಾಯ್ದೆ ಪರಿಣಾಮಕಾರಿ ಜಾರಿಗೆ ಕಟ್ಟುನಿಟ್ಟಿನ ಸೂಚನೆ



ವಿಜಯಪುರ ಜಿಲ್ಲೆಯಾದ್ಯಂತ ಇರುವ ಶಾಲಾ-ಕಾಲೇಜ್ ಆವರಣದ 100 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ತಂಬಾಕು ಉತ್ಪನ್ನಗಳ ಮಾರಾಟವಾಗದಂತೆ ನಿಗಾ ವಹಿಸಲು ಅಧಿಕಾ-ರಿಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ.ಕೆ ಸೂಚನೆ ನೀಡಿದರು.

ಶಾಲೆಯ ಮುಖ್ಯೋಪಾಧ್ಯಾಯರು ಸೇರಿದಂತೆ ಶಾಲಾ ಅಭಿವೃದ್ಧಿ ಸಮಿತಿಯವರು ಕೊಟ್ಪಾ ಕಾಯ್ದೆಯನ್ನು ಪರಿಣಾಮಕಾ-ರಿಯಾಗಿ ಜಾರಿಗೆ ತರುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡು, ಅರಿವು ಮೂಡಿಸಬೇಕು. ತಂಬಾಕು ಉತ್ಪನ್ನಗಳ ಉಪಯೋಗದಿಂದ ದುಷ್ಪ-ರಿಣಾಮ ಹಾಗೂ ಕಾಯ್ದೆಯ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಅವರು ಸೂಚನೆ ನೀಡಿದರು.

## ಮಾದಕ ವಸ್ತುಗಳ ಬೆಳೆ ಬೆಳೆಯದಂತೆ ಜಾಗೃತಿ ಮೂಡಿಸಬೇಕು



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಗಾಂಜಾ ಸೇರಿದಂತೆ ಮಾದಕ ವಸ್ತುಗಳ ಬೆಳೆ ಬೆಳೆಯದಂತೆ ಕಾನೂನು ಅರಿವು, ಜಾಗೃತಿ ಮೂಡಿಸಬೇಕು. ಬಾರ್ ರೆಸ್ಟೋರೆಂಟ್ ಆವರಣದಲ್ಲಿ ಸೂಚನಾ ಫಲಕಗಳನ್ನು ಪ್ರದರ್ಶಿಸುವಂತೆ ನೋಡಿಕೊಳ್ಳಬೇಕು. ಈ ಬಗ್ಗೆ ನಿರಂತರವಾಗಿ ಪರಿಶೀಲನೆ ನಡೆಸುವಂತೆ ಅವರು ಸೂಚನೆ ನೀಡಿದರು. ಜಿಲ್ಲಾ ಮಟ್ಟದ ಮಾದಕ ದ್ರವ್ಯಗಳ ಹಾವಳಿ ನಿಯಂತ್ರಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದ್ದು, ಈ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ನಾರ್ಕೋ ಕೋ-ಆರ್ಡಿನೇಷನ್ ಸೆಂಟರ್ (ಓ-ಅಔಖಆ) ಸಮಿತಿಯು ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯಲ್ಲಿ ನಡೆದ ಮಾದಕ ದ್ರವ್ಯ ಜಪ್ತಿ ಮತ್ತು ಕಾನೂನು ಕ್ರಮಗಳ ಬಗ್ಗೆ ಜಿಲ್ಲೆಯಾದ್ಯಂತ ಎನ್.ಡಿ.ಪಿ.ಎಸ್. ಕಾಯ್ದೆಯಡಿ ಹಲವು ಪ್ರಕರಣಗಳನ್ನು ದಾಖಲಿಸಲಾಗಿದೆ.

2024ನೇ ಸಾಲಿನಲ್ಲಿ: ಒಟ್ಟು 28 ಪ್ರಕರಣಗಳು ದಾಖಲಾಗಿದ್ದು, 297 ಕೆ.ಜಿ. 872 ಗ್ರಾಂ ಗಾಂಜಾ ವಶಪಡಿಸಿಕೊಳ್ಳಲಾಗಿತ್ತು. ಇದರಲ್ಲಿ 373 ಕೆ.ಜಿ. 574 ಗ್ರಾಂ ಗಾಂಜಾವನ್ನು ನಾಶಪಡಿಸಲಾಗಿದೆ.

2025ನೇ ಸಾಲಿನಲ್ಲಿ: 338 ಕೆ.ಜಿ. 037 ಗ್ರಾಂ ಗಾಂಜಾ ಜಪ್ತಿ ಮಾಡಲಾಗಿದೆ. ಜೊತೆಗೆ 18 ಕೆ.ಜಿ. 432 ಗ್ರಾಂ ಅಫೀಮು ವಶಪಡಿಸಿಕೊಳ್ಳಲಾಗಿದ್ದು, ಗಣನೀಯ ಪ್ರಮಾಣದ ಮಾದಕ ದ್ರವ್ಯವನ್ನು ನಾಶಪಡಿಸಲಾಗಿದೆ.

ಪ್ರಸಕ್ತ ವರ್ಷದಲ್ಲಿ ಇಲ್ಲಿಯವರೆಗೆ 13 ಪ್ರಕರಣಗಳು ದಾಖಲಾಗಿದ್ದು, ಸುಮಾರು 9 ಕೆ.ಜಿ. 532 ಗ್ರಾಂ ಗಾಂಜಾವನ್ನು ಪೊಲೀಸರು ವಶಕ್ಕೆ ಪಡೆಯಲಾಗಿದೆ ಎಂದು ವಿವರಿಸಿದರು.

### ವಿಜಯಪುರದಲ್ಲಿ ನಡೆದ ಮಹಿಳಾ ಕಲ್ಯಾಣ ವಿಭಾಗದ ಯೋಜನೆಗಳ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಆನಂದ.ಕೆ ಹೇಳಿಕೆ

# ಬಾಲ್ಯವಿವಾಹ ತಡೆಗಟ್ಟುವಲ್ಲಿ ಸಮನ್ವಯ ಮುಖ್ಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿ ಬಾಲ್ಯವಿವಾಹ ಎಂಬ ಸಾಮಾಜಿಕ ಪಿಡುಗನ್ನು ನಿರ್ಮೂಲನೆ ಮಾಡಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಮಹಿಳಾ ಕಲ್ಯಾಣ ವಿಭಾಗದ ಯೋಜನೆಗಳ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾವಲು ಸಮಿತಿ ಪ್ರತಿಮಾಹೆ ಸಭೆ ನಡೆಸಿ ಎಂದು ಈಗಾಗಲೇ ಈ ಹಿಂದಿನ ಸಭೆಯಲ್ಲಿ ನಿರಂತರವಾಗಿ ಸೂಚಿಸಲಾಗಿದೆ. ಗ್ರಾಮ ಪಂಚಾಯತಿ ಕಾವಲು ಸಮಿತಿ ಚರ್ಚಿಸಿರುವ ವಿಷಯ ಪ್ರಚಾರ ಕೈಗೊಳ್ಳಬೇಕು. ಜನರಿಗೆ ಗೊತ್ತಾಗಬೇಕು. ಇದರಿಂದ ಇದರ ಕಾಯ್ದೆಯ ಅರಿವು ಜನರಿಗೆ ಮೂಡಲಿದೆ ಎಂದರು.

ಜಿಂಗಲ್ಸ್ ಮೂಲಕ ಪ್ರಚಾರ ಮಾಡಬೇಕು. ಗ್ರಾಮೀಣ ಹಾಗೂ ಸ್ಥಳೀಯ ಸಂಸ್ಥೆಗಳ ಸ್ವಚ್ಛವಾಹಿನಿ ಮೂಲಕ ತಿಳಿಹೇಳಬೇಕು. ಬಾಲ್ಯ ವಿವಾಹ ಇದೊಂದು ಸಾಮಾಜಿಕ ಪಿಡುಗಾಗಿದ್ದು, ಮಕ್ಕಳ ಬಾಲ್ಯ ಸುಂದರಗೊಳ್ಳಲು ಎಲ್ಲ ಇಲಾಖೆಯ ಅಧಿಕಾರಿಗಳು ಸಮನ್ವಯ ಸಾಧಿಸಿ ಬಾಲ್ಯ ವಿವಾಹ ತಡೆಯಬೇಕು ಎಂದರು. ಮಾರ್ಚ್-2026ರ ಅವಧಿಯಲ್ಲಿ ಜಿಲ್ಲೆಯಾದ್ಯಂತ ನಡೆದ ಕಾರ್ಯಾಚರಣೆಯಲ್ಲಿ ಒಟ್ಟು 13 ಬಾಲ್ಯವಿವಾಹಗಳನ್ನು ಯಶಸ್ವಿಯಾಗಿ ತಡೆಯಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ, ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಇಂಡಿ ಉಪ ವಿಭಾಗಾಧಿಕಾರಿಗಳಾದ ಚಿದಾನಂದ ಗುರುಸ್ವಾಮಿ, ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ, ಉಪ ಅರಣ್ಯ ಸಂರಕ್ಷಣಾಧಿಕಾರಿ ಮಲ್ಲಿಕಾರ್ಜುನ ಕುಸುನಾಳ, ಪಾಲಿಕೆಯ ಉಪ ಆಯುಕ್ತ ಮಹಾವೀರ ಬೋರಣ್ಣವರ, ಪ್ರಾದೇಶಿಕ ಸಾರಿಗೆ ಅಧಿಕಾರಿ ವಸೀಂ ಬಾಬಾ ಮುದ್ದೇಬಿಹಾಳ, ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಅಧಿಕಾರಿ ಪರಸುರಾಮ ಹಿಟ್ನಳ್ಳಿ, ಸಮಾಜ ಕಲ್ಯಾಣ ಇಲಾಖೆಯ ಮಂಟೂರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ದೀಪಾ ಕಾಳೆ, ಪೀಟರ್ ಅಲೆಕ್ಸಾಂಡರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



## ಮಹಿಳಾ ಸುರಕ್ಷತೆ ಮತ್ತು ಸಬಲೀಕರಣಕ್ಕೆ ಆದ್ಯತೆ

ವಿಜಯಪುರ ಜಿಲ್ಲೆಯಲ್ಲಿ ಕೌಟುಂಬಿಕ ದೌರ್ಜನ್ಯ ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾದ ಪ್ರಕರಣಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ನಿರ್ವಹಿಸಲಾಗುತ್ತಿದ್ದು, ಸಂತ್ರಸ್ತ ಮಹಿಳೆಯರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಆಶಾದಾಯಕ ಪ್ರಗತಿ ಕಂಡುಬಂದಿದೆ. ಮಾರ್ಚ್ 2026ರ ಅಂತ್ಯಕ್ಕೆ ಲಭ್ಯವಿರುವ ಅಂಕಿ-ಅಂಶಗಳ ಪ್ರಕಾರ, ಒಟ್ಟು 184 ಪ್ರಕರಣಗಳ ಪೈಕಿ ಬಹುಪಾಲು ಪ್ರಕರಣಗಳಲ್ಲಿ ಸಕಾರಾತ್ಮಕ ಸ್ಪಂದನೆ ದೊರೆತಿದೆ.

# ಸಾಲಿನ್ ಯುಥ್ ಗೇಮ್ಸ್: ಮಲೇಷ್ಯಾಗೆ ಜೀಶಾನ್ ರಿಸಾಲ್ದಾರ್ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಇತ್ತಿಚೆಗೆ ನೇಪಾಳದಲ್ಲಿ ಯುಥ್ ಗೇಮ್ಸ್ ಕೌನ್ಸಿಲ್ ಇಂಡಿಯಾ ಸಹಯೋಗದಲ್ಲಿಯುಥ್ ಗೇಮ್ಸ್ ಫೌಂಡೇಷನ್ ಹಮ್ಮಿಕೊಂಡಿದ್ದ 8ನೇ ಸಾಲಿನ್ ಯುಥ್ ಗೇಮ್ಸ್ ಇಂಡೋ-ನೇಪಾಳ ಇಂಟ-ರನ್ಯಾಷನಲ್ ಸೀರೀಸ್-2026 ಕ್ರೀಡಾಕೂಟದಲ್ಲಿ ಪಟ್ಟಣದ ಬಸವ ಇಂಟರ್ ನ್ಯಾಷನಲ್ ಶಾಲೆಯ ವಿದ್ಯಾರ್ಥಿ ಮೊಹ್ಮದ್ ಜೀಶಾನ್ ರಿಸಾಲ್ದಾರ್ ಅಂಡರ್ 10 ವಿಭಾಗದಲ್ಲಿ 100 ಮೀಟರ್ ಓಟದಲ್ಲಿ ಪ್ರಥಮ ಸ್ಥಾನವನ್ನು ಪಡೆದು ಈಗ ಮಲೇಷ್ಯಾದಲ್ಲಿ ನಡೆಯುವ ಸೌಥ್ ಏಷಿಯನ್ ಯುಥ್ ಗೇಮ್ಸ್ ಇಂಟರ್ ನ್ಯಾಷನಲ್ ಚಾಂಪಿಯನ್‌ಶಿಪ್ ಕ್ರೀಡಾಕೂಟಕ್ಕೆ ಆಯ್ಕೆ ಯಾಗಿದ್ದಾನೆ.

ಆರಂಭವಟ್ಟದಿಂದಲೇ ಅಥ್ಲೇಟಿಕ್ಸ್ ವಿಭಾದಲ್ಲಿ ಕ್ರೀಡಾ ಸಾಧನೆಗೈಯುತ್ತಿರುವ ಜೀಶಾನ ರಿಸಾಲ್ದಾರ್ ಮೊನ್ನೆಯಷ್ಟೆ ಗೋವಾದಲ್ಲಿ ಹಮ್ಮಿಕೊಂಡಿದ್ದ ಯುಥ್ ಗೇಮ್ಸ್ ಕೌನ್ಸಿಲ್ ಇಂಡಿಯಾ ಕ್ರೀಡಾ ಕೂಟದಲ್ಲಿ ಕರ್ನಾಟಕ ಪರವಾಗಿ ಭಾಗವಹಿಸಿ 100 ಮೀಟರ್‌ದಲ್ಲಿ ಗೋಲ್ಡ್ ಮೇಡಲ್ ಪಡೆದು ರಾಜ್ಯದ ಹೆಸರನ್ನು ತಂದಿದ್ದ. ಸಧ್ಯ ಇಂಡೋ ನೇಪಾಳ ಇಂಟರ್ ನ್ಯಾಷನಲ್ ಸೀರೀಸ್‌ನಲ್ಲಿ ಮತ್ತೆ 100 ಮೀಟರ್ ಓಟವನ್ನು 14:56 ಸೆಕೆಂಟ್‌ನಲ್ಲಿ ಪೂರ್ಣಗೊಳಿಸಿ ಪ್ರಥಮ ಸ್ಥಾನವನ್ನು ಪಡೆದು ದೇಶದ ಕೀರ್ತಿಯನ್ನು ಹೆಚ್ಚಿಸಿದ್ದಾನೆ.

ತಾಲೂಕಿನ ಸರೂರ ಗ್ರಾಮದ ಕಬ್ಬಡಿ ಪರಿಣಿತ ದೈಹಿಕ ಶಿಕ್ಷಕರಾದ ಸಿದ್ರಾಮಪ್ಪ ಭಜಂತ್ರಿ ನೇತೃತ್ವದಲ್ಲಿ ಜೀಶಾನ ಈ ಕ್ರೀಡಾಕೂಟದಲ್ಲಿ ಭಾಗವಹಿಸಿ ಜಯ ಸಾಧಸಿದಕ್ಕೆ ಶಾಲೆಯ ಪ್ರಿನ್ಸಿಪಾಲ್ ಪ್ರಭಾ ಚಿನಿವಾರ, ಹಾಗೂ ಚೇರ್ಮನ್ ಶಿವುಕುಮಾರ್ ಹರ್ಲಾಪುರ್ ಹಾಗೂ ಸಿಬ್ಬಂದಿ ವರ್ಗ ಶುಭ ಹಾರೈಸಿದ್ದಾರೆ.

ಶಾಲೆಯ ಶಿಕ್ಷಕಿ ಪ್ರಿಯಾಂಕಾ ಹೊಸಮನಿ ಮಕ್ಕಳೊಂದಿಗೆ ನೇಪಾಳಕ್ಕೆ ತೆರಳಿ ಸಾಥ ನೀಡಿದಕ್ಕೆ ಪೋಷಕರು ಧನ್ಯವಾದಗಳನ್ನು ಅರ್ಪಿಸಿದ್ದಾರೆ.

ಅಥ್ಲೇಟಿಕ್ಸ್‌ನಲ್ಲಿ ಆರಂಭದಲ್ಲಿಯೇ ಸಾಧನೆಗೈಯುತ್ತಿರುವ ಜೀಶಾನ ಮುಂದೆ ಖೇಲೋ ಇಂಡಿಯಾಗೆ ಆಯ್ಕೆಯಾಗಿ ಭಾರತಪರವಾಗಿ ಇತರ ಅಂತರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಏಷಿಯಾ ಗೇಮ್ಸ್ ಆಗಲಿ, ಓಲಂಪಿಕ್ ಆಗಲಿ, ಕಾಮವೆಲ್ಥ್ ಗೇಮ್ಸ್ ದಂತಹ ಅಂತರಾಷ್ಟ್ರೀಯ ಕ್ರೀಡಾಚಟುವಟಿಕೆಯಲ್ಲಿ ಭಾಗವಹಸಿ ದೇಶದ ಕೀರ್ತಿಯನ್ನು ತರಲಿ ಎಂದು ಇಲ್ಲಿನ ಜನತೆ, ವಿವಿಧ ದಲಿತಪರ, ಪ್ರಗತಿಪರ ಸಂಘಟನೆಗಳು ಹಾಗೂ ಸಂಘ ಸಂಸ್ಥೆಗಳು ಶುಭಹಾರೈಸಿದ್ದಾರೆ.




### ರಸ್ತೆಗಳಲ್ಲಿ ಮಧ್ಯಾಹ್ನ ಜನಸಂಚಾರ ವಿರಳ । ಬತ್ತಿದ ಕೊಳವೆ ಬಾವಿಗಳು । ಹೆಚ್ಚಾದ ತಂಪು ಪಾನೀಯಗಳ ಬೇಡಿಕೆ । ಗೃಹಜ್ಯೋತಿ ಪರಿಮಿತಿ ದಾಟುತ್ತಿರುವ ಕರೆಂಟ್ ಬಿಲ್

# ಕೋಟೆ ನಾಡಿನಲ್ಲಿ ರಣಬಿಸಿಲಿನ ತಾಪಕ್ಕೆ ಜನ ಹೈರಾಣ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ್ ಎಮ್ ಇಟ್ಟಿ

ಬಾಗಲಕೋಟೆ: ಏಪ್ರೀಲ್ ಬಿಸಿಲಿಗೆ ಜನ ಹೈರಾಣಾಗಿದ್ದಾರೆ. ಕೋಟೆನಾಡಿನಲ್ಲಿ ತಾಪಮಾನ ಏರಿಕೆಯಿಂದ ಜನ ತತ್ತರಿಸಿ ಹೋಗಿದ್ದಾರೆ. ಮನೆಯೊಳಗೆ ಎಸಿ, ಫ್ಯಾನು ಏನೇ ಇದ್ದರೂ ಸೆಕೆ ತಾಳಲಾಗುತ್ತಿಲ್ಲ. ಮಧ್ಯಾಹ್ನವಂತೂ ಹೊರ ಬರಲು ಸಾಧ್ಯವಾಗುವುದೇ ಇಲ್ಲ. ಮೇಲ್ಛಾವಣಿಗೆ ನೀರು ಹಾಯಿಸಿ ಮನೆಯನ್ನು ತಣ್ಣಗೆ ಮಾಡಿಕೊಳ್ಳುತ್ತಿದ್ದಾರೆ. ಇನ್ನು ಜಮೀನಿನಲ್ಲಿರುವ ಬೆಳೆಗಳೂ ಒಣಗುತ್ತಿದ್ದು, ನೀರಿಲ್ಲದೇ ಬೆಳೆ ಉಳಿಸಿಕೊಳ್ಳಲು ರೈತರು ಪರದಾಡುತ್ತಿದ್ದಾರೆ. ಕೋಟೆನಾಡಿನಲ್ಲಿ ರಣಬಿಸಿಲಿನ ತಾಪಕ್ಕೆ ಜನ ಹೈರಾಣಾಗಿದ್ದಾರೆ. ಜಿಲ್ಲೆಯ ಸುತ್ತಮುತ್ತ ಉತ್ತಮ ಮಳೆಯಾಗುತ್ತಿದ್ದರೂ ಜಮಖಂಡಿ ಮುಧೋಳ ಬೀಳಗಿ ರಬಕವಿ-ಬನಹಟ್ಟಿ ಸೇರಿದಂತೆ ಅನೇಕ ತಾಲೂಕಿನಲ್ಲಿ ಗಟ್ಟಿ ಮಳೆಯಾಗದೆ ತಾಪಮಾನ ಇನ್ನಷ್ಟು ಅಧಿಕವಾಗಿದೆ.

ಸುಡು ಬೇಸಿಗೆಯಲ್ಲಿ ಬೆಳೆ ರಕ್ಷಣೆಗೆ ಕೊಳವೆಬಾವಿ ಪಂಪ್‌ಸೆಟ್‌ಗಳಲ್ಲಿ ಬರುವ ಸಣ್ಣ ಪ್ರಮಾಣದ ನೀರಿನಿಂದ ಬೆಳೆ ಸಂರಕ್ಷಿಸಿಕೊಳ್ಳಲು ರೈತರು ಪರದಾಟ ನಡೆಸಿದ್ದಾರೆ. ಬಿಸಿಲು ತಾಪ ಹೆಚ್ಚಾಗಿದ್ದು, ಬೆಳಗ್ಗೆ 11 ರ ನಂತರ ಡಾಂಬರ್ ರಸ್ತೆಯಲ್ಲಿ ಸಂಚರಿಸುವುದೇ ದುಸ್ತರವಾಗಿದೆ. ದ್ವಿಚಕ್ರ ವಾಹನಗಳಲ್ಲಿ ಮಧ್ಯಾಹ್ನದ ಉರಿ ಬಿಸಿಲಲ್ಲಿ ಸಂಚರಿಸುವ ಪ್ರಯಾಣಿಕರಿಗೆ ರಸ್ತೆಯ ಬಿಸಿ ಸುಡುವ ಅನುಭವ ನೀಡುತ್ತಿದೆ.

ಮನೆಗಳಲ್ಲಿ ಹಗಲು, ರಾತ್ರಿ ಫ್ಯಾನ್‌ಗಳು ನಿರಂತರವಾಗಿ ಓಡುತ್ತಿದ್ದರೂ ತಂಪು ನೀಡಲು ಸಫಲವಾಗುತ್ತಿಲ್ಲ. ಫ್ಯಾನ್‌ಗಳ ನಿರಂತರ ಬಳಕೆಯಿಂದ ಗೃಹಜ್ಯೋತಿ ಪರಿಮಿತಿ (ಲಿಮಿಟ್) ದಾಟಿ, ದುಬಾರಿ ಕರೆಂಟ್ ಬಿಲ್ ಭರಿಸುವಂತಾಗಿದೆ. ಜನ, ಆರ್‌ಸಿಸಿ ಮನೆಯವರು ಹಾಗೂ ಪತ್ರಾಸ್ ಗಳಿಂದ ನಿರ್ಮಿಸಿಕೊಂಡ ಮನೆಗಳ ನಿವಾಸಿಗಳು, ಬಿಸಿಲ ತಾಪ ತಡೆಗಟ್ಟುವ ಯತ್ನ ನಡೆಸಿದ್ದಾರೆ. ಮಧ್ಯಾಹ್ನ ಮನೆಯಿಂದ ಹೊರಗಡೆ ಬರಲು ಜನ ಹಿಂಜರಿಯುವಂತಾಗಿದೆ. ರಸ್ತೆಗಳಲ್ಲಿ ಜನಸಂಚಾರ ವಿರಳವಾಗಿ ಬಿಕೋ ಎನ್ನುತ್ತಿದೆ. ವಿಪರೀತ ದಗೆಯ ಕಾರಣ ತಂಪು ಪಾನೀಯ, ಎಳನೀರು, ಕಲ್ಲಂಗಡಿ, ಹಣ್ಣಿನ ಜ್ಯೂಸ್, ಮಜ್ಜಿಗೆ, ಮೊಸರು ಸೇವನೆಗೆ ಜನ ಮೊರೆ ಹೋಗಿದ್ದಾರೆ. ಶಾಲಾ, ಕಾಲೇಜಿಗೆ ರಜೆ ಹಿನ್ನೆಲೆಯಲ್ಲಿ ಇಲ್ಲಿನ ನದಿ, ಹಳ್ಳ ಕೊಳ್ಳಗಳಿಗೆ ಇಳಿದು ನೀರಿನಾಟ ಆಡುವ ಮೂಲಕ ದೇಹ ತಂಪಾಗಿಸಿಕೊಳ್ಳುವ ಪ್ರಯತ್ನ ನಡೆಸಿದ್ದಾರೆ.





**ಗುಡುಗು, ಸಿಡಿಲಿನ ಆರ್ಭಟ:**

ಕಬ್ಬಿನದ ಪತ್ರಾಸ್ ಮನೆ ಚಾವಣಿ ಹೊಂದಿರುವ ನಿವಾಸಿಗಳ ಪಾಡಂತೂ ಬೇಸಿಗೆ ಬಿಸಿಲಲ್ಲಿ ಹೇಳತೀರದಾಗಿದೆ. ಚಾವಣಿ ಮೇಲೆ ತೆಂಗಿನ ಗರಿಗಳನ್ನು ಹಾಕಿ ಬೆಳಗ್ಗೆ, ಸಂಜೆ ಗರಿಗಳಿಗೆ ನೀರು ಸುರಿದು ತಂಪನ್ನಾಗಿಸಿಕೊಳ್ಳುವ ಪ್ರಯತ್ನ ನಡೆಸಿದ್ದಾರೆ.

ಹೊಲ, ಗದ್ದೆಗಳಲ್ಲಿ ಕೆಲಸ ಮಾಡುವವರು ಮುಂಜಾನೆ ಬೇಗ ಕೆಲಸ ಪ್ರಾರಂಭಿಸಿ 11ಕ್ಕೆ ಮನೆ ಸೇರಿಕೊಳ್ಳುತ್ತಿದ್ದಾರೆ. ಎಲ್ಲರ ಚಿತ್ತವೂ ಆಗಸದತ್ತ ನೆಟ್ಟಿದೆ. ನೆಲ ತೇವವಾಗಲು ಸಾಕಾಗುವಷ್ಟು ಆಗೊಮ್ಮೆ ಈಗೊಮ್ಮೆ ಬೀಳುತ್ತಿರುವ ಮಳೆ ಆನೆ ಹೊಟ್ಟೆಗೆ ಅರೆಕಾಸಿನ ಮಜ್ಜಿಗೆಯಂತಾಗಿದೆ. ಬೀಳುವ ಅಲ್ಪ ಸ್ವಲ್ಪ ಮಳೆಗೆ ಬಾನಂಗಳದಲ್ಲಿ ಸಿಡಿಲು ಗುಡುಗಿನ ಆರ್ಭಟ ಜೋರಾಗಿದ್ದು ಜನ ಬೆಚ್ಚಿ ಬೀಳುವಂತೆ ಮಾಡಿದೆ.

## ಎಳನೀರು ದರ ದುಬಾರಿ

ಬಾಗಲಕೋಟೆ ಜಿಲ್ಲೆಯ ಎಲ್ಲ ತಾಲೂಕಿನ ಸುತ್ತ ವ್ಯಾಪಕ ನುಸಿರೋಗದ ಬಾಧೆಯಿಂದ ಬೇಸಿಗೆಯಲ್ಲಿ ತೆಂಗಿನ ಕಾಯಿ ದರ ಗಗನಕ್ಕೆರಿದೆ. ಹೀಗಾಗಿ ಎಳನೀರು ದರ ಕೂಡ ದುಪ್ಪಟ್ಟಾಗಿದೆ. ಕಳೆದ ಬೇಸಿಗೆಯಲ್ಲಿ 20 ರೂ.ನಿಂದ 30 ರೂ. ಧಾರಣೆಯಿದ್ದ ಎಳನೀರು, ಪ್ರಸ್ತುತ 50 ರೂ.ನಿಂದ 60 ರೂ.ಗೆ ದಾಟಿದೆ.

## ಬೇಸಿಗೆ ಬಿಸಿಯೂಟ ವಂಚಿತ

ಪ್ರತಿ ಬೇಸಿಗೆ ಶಾಲಾ ರಜಾ ದಿನಗಳಲ್ಲಿ ಬಡಮಕ್ಕಳು ಹಸಿವಿನಿಂದ ಬಳಲಬಾರದು ಎಂಬ ಸದುದ್ದೇಶದಿಂದ ಸರಕಾರ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟಕ್ಕೆ ವ್ಯವಸ್ಥೆ ಮಾಡಿತ್ತು. ಈ ವರ್ಷ ಬಿಸಿಯೂಟಕ್ಕೆ ವ್ಯವಸ್ಥೆ ಮಾಡದೆ ಶಾಲಾ ಮಕ್ಕಳು ಪ್ರಯೋಜನ ವಂಚಿತರಾಗಿದ್ದಾರೆ.

# ಲವ್ ಜಿಹಾದ್, ಭೂ ಅತಿಕ್ರಮಣ ವಿರುದ್ಧ ಕಠಿಣ ಕಾನೂನು ಜಾರಿಗೆ ಆಗ್ರಹಿಸಿ ಪ್ರತಿಭಟನೆ




ಬೀದರ್: ದೇಶದಲ್ಲಿ ಹೆಚ್ಚುತ್ತಿರುವ ಲವ್ ಜಿಹಾದ್, ಬಲವಂತದ ಮತಾಂತರ, ಹಿಂದೂ ಮಹಿಳೆಯರ ಮೇಲಿನ ಶೋಷಣೆ ಹಾಗೂ ಸಾರ್ವಜನಿಕ ಭೂಮಿಗಳ ಅಕ್ರಮ ಅತಿಕ್ರಮಣಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳ ಕಾರ್ಯಕರ್ತರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಮಂಗಳವಾರ ಪ್ರತಿಭಟನಾ ಪ್ರದರ್ಶನ ಮಾಡಿದರು.

ಪ್ರತಿಭಟನೆಯಲ್ಲಿ ವಿಶ್ವ ಹಿಂದೂ ಪರಿಷತ್ ಪ್ರಾಂತ್ ಕಾರ್ಯಕಾರಿ ಸಮಿತಿ ಸದಸ್ಯ ರಾಮಕೃಷ್ಣ ಸಾಳ್ಳೆ, ಪ್ರಾಂತ್ ಸಹ ಸಂಯೋಜಕ ಸತೀಶ್ ನೌಬಾದೆ, ಜಿಲ್ಲಾಧ್ಯಕ್ಷ ವೀರಶೆಟ್ಟಿ ಖ್ಯಾಮಾ, ಜಿಲ್ಲಾ ಕಾರ್ಯದರ್ಶಿ ಬಸವರಾಜ್ ಯದ್ಲಾಪುರೇ, ಬಜರಂಗದಳ ಜಿಲ್ಲಾ ಸಂಯೋಜಕ ಭೀಮಣ್ಣ ಸುರೋಳಿ, ರೋಹಿತ್ ಗುರೂಜಿ, ರವಿ ನೌದಗಿ, ಶ್ರೀಶೈಲ ವತಾಡೆ, ಸೋಮ ಪಾಟೀಲ್, ಶಶಿ ಹೊಸಳ್ಳಿ, ಶಶಿ ಪಾಟೀಲ್ ಚೌಳಿ, ಸಾಗರ್ ಫಾಠಕ್, ಆಕಾಶ ಕೊಡಗೆ, ಅಭಿನಯ, ಶಂಕರ್ ಖ್ಯಾಮಾ, ಸಂಜು, ಬೀರಪ್ಪ ಹಿಪ್ಪಳಗಾವ್, ಬಸವರಾಜ್ ಮಾನುರೆ, ಗುಂಡು ಬಿರಾದಾರ್ ಮುಂತಾದವರು ಪಾಲ್ಗೊಂಡಿದ್ದರು.

ಬಳಿಕ ರಾಷ್ಟ್ರಪತಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಪತ್ರ ಸಲ್ಲಿಸಿದ ಅವರು, ದೇಶದ ವಿವಿಧ ಭಾಗಗಳಲ್ಲಿ ಲವ್ ಜಿಹಾದ್ ಹೆಸರಿನಲ್ಲಿ ಹಿಂದೂ ಯುವತಿಯರ ದೈಹಿಕ ಮತ್ತು ಮಾನಸಿಕ ಶೋಷಣೆ, ಬ್ಲ್ಯಾಕ್‌ಮೇಲ್, ಬಲವಂತದ ಮತಾಂತರ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ ಗಂಭೀರ ಆತಂಕ ವ್ಯಕ್ತಪಡಿಸಲಾಗಿದೆ. ನಾಸಿಕ್, ಹುಬ್ಬಳ್ಳಿ, ಕೊಪ್ಪಳ, ಬಾಗಲಕೋಟೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ನಡೆದ ಘಟನೆಗಳನ್ನು ಉಲ್ಲೇಖಿಸಿ, ಇಂತಹ ಪ್ರಕರಣಗಳನ್ನು ವಿಶೇಷ ಪ್ರಕರಣಗಳೆಂದು ಪರಿಗಣಿಸಿ ಎನ್‌ಐಎ ತನಿಖೆಗೆ ಒಪ್ಪಿಸಬೇಕು ಎಂದು ಆಗ್ರಹಿಸಿದರು.

ಅದೇ ರೀತಿ ನಗರಗಳ ಪ್ರಮುಖ ಸ್ಥಳಗಳು, ಅರಣ್ಯ ಭೂಮಿಗಳು, ರೈಲ್ವೆ ಹಾಗೂ ಬಸ್ ನಿಲ್ದಾಣಗಳ ಸುತ್ತಮುತ್ತ ನಡೆಯುತ್ತಿರುವ ಅಕ್ರಮ ಭೂ ಅತಿಕ್ರಮಣ ರಾಷ್ಟ್ರ ಭದ್ರತೆಗೆ ನೇರ ಸವಾಲಾಗಿದೆ. ಕೇಂದ್ರ ಸರ್ಕಾರವು ಲವ್ ಜಿಹಾದ್ ಮತ್ತು ಬಲವಂತದ ಧಾರ್ಮಿಕ ಮತಾಂತರ ತಡೆಗೆ ಕಠಿಣ ಕಾನೂನು ಜಾರಿಗೆ ತರಬೇಕು ಹಾಗೂ ರಾಷ್ಟ್ರವಿರೋಧಿ ಚಟುವಟಿಕೆಗಳಲ್ಲಿತೊಡಗಿರುವವರ ವಿರುದ್ಧ ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

# ಹಳ್ಳಿಖೇಡ್ ಸಕ್ಕರೆ ಕಾರ್ಖಾನೆ ಪುನರಾರಂಭಕ್ಕೆ ಆಗ್ರಹ




ಬೀದರ್: ಜಿಲ್ಲೆಯ ಹಳ್ಳಿಖೇಡ್ (ಬಿ) ಯಲ್ಲಿರುವ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಸರ್ಕಾರ ವಶಕ್ಕೆ ಪಡೆದು ತಕ್ಷಣ ಪುನರಾರಂಭ ಮಾಡಬೇಕು ಹಾಗೂ ರೈತರ ಎಲ್ಲ ವಿಧದ ಸಾಲಗಳನ್ನು ಮನ್ನಾ ಮಾಡಬೇಕು ಎಂದು ಒತ್ತಾಯಿಸಿ ಸಂಯುಕ್ತ ಕಿಸಾನ ಮೋರ್ಚಾ ಜಿಲ್ಲಾ ಘಟಕದ ಪದಾಧಿಕಾರಿಗಳು, ಕಾರ್ಯಕರ್ತರು ಮಂಗಳವಾರ ಮುಖ್ಯಮಂತ್ರಿ ಅವರಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಪತ್ರ ಸಲ್ಲಿಸಿದರು.

ಜಿಲ್ಲೆಯ ಮೊಟ್ಟಮೊದಲ ಸಹಕಾರಿ ವಲಯದ ಸಕ್ಕರೆ ಕಾರ್ಖಾನೆ ಆಗಿರುವ ಹಳ್ಳಿಖೇಡ್ ಸಕ್ಕರೆ ಕಾರ್ಖಾನೆಯಲ್ಲಿ ಜಿಲ್ಲೆಯ ಅನೇಕ ರೈತರು ಷೇರುಗಳನ್ನು ಖರೀದಿಸಿದ್ದು, ಎರಡು ವರ್ಷಗಳಿಂದ ಸರ್ಕಾರದ ಅನುಮತಿ ಇಲ್ಲದೆ ಕಾರ್ಖಾನೆ ಮುಚ್ಚಲ್ಪಟ್ಟಿರುವುದರಿಂದ ರೈತರು ಹಾಗೂ ನೌಕರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಇತ್ತೀಚಿನ ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದ ರೈತರ ಬೆಳೆಗಳು ಹಾನಿಗೊಳಗಾಗಿದ್ದು, ಬೆಳೆದ ಬೆಳೆಗಳಿಗೆ ಸಮರ್ಪಕ ಮತ್ತು ವೈಜ್ಞಾನಿಕ ಬೆಲೆ ಸಿಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಸರ್ಕಾರವು ರೈತರ ಎಲ್ಲಾ ಸಾಲಗಳನ್ನು ಸಂಪೂರ್ಣ ಮನ್ನಾ ಮಾಡಬೇಕು ಎಂದು ಅವರು ಒತ್ತಾಯಿಸಿದರು.ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ನಡೆಯುತ್ತಿರುವ ಅಕ್ರಮಗಳ ಕುರಿತು ಜಿಲ್ಲಾಮಟ್ಟದ ಅಧಿಕಾರಿಗಳು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು. ಈ ಸಂದರ್ಭದಲ್ಲಿ ಶಿವರಾಯ್ ಮುದಾಳೆ, ಮಲ್ಲಿಕಾರ್ಜುನ್ ಸ್ವಾಮಿ, ವೀರಾರೆಡ್ಡಿ ಪಾಟೀಲ್, ಮಾರುತಿ ಬೌದ್ಧೆ, ಬಾಬುರಾವ್ ಹೊನ್ನಾ, ಖಾಸಿಮ್ ಅಲಿ, ಶಿವರಾಜ್ ಪಾಟೀಲ್ ಅತಿವಾಳ್, ಖಮರ್ ಪಟೇಲ್, ಸೂರ್ಯಕಾಂತ್ ಮಟಕಟ್ಟಿ, ನಜೀರ್ ಅಹ್ಮದ್, ಶಫಾಯತ್ ಅಲಿ, ಜೈಶೀಲಕುಮಾರ್, ಅರುಣ್ ಪಟೇಲ್, ನನ್ನೇಸಾಬ್ ಟಿ. ಮಿರ್ಜಾಪೂರ್, ಮುನಿರೋದ್ದೀನ್ ಬಗದಲ್ ಮುಂತಾದವರು ಉಪಸ್ಥಿತರಿದ್ದರು.


# ಗಡಿಯಾರ ನೋಡದೇ ದುಡಿವವ ಮಾಲೀಕನಾಗಿ ಬೆಳೆಯುತ್ತಾನೆ

■ ಉದಯರಶ್ಮಿ ದಿನಪತ್ರಿಕೆ

ಮನದಂಗಳ



'ಉದ್ಯೋಗಂ ಪುರುಷ ಲಕ್ಷಣಂ' ಎನ್ನುವ ಕಾಲವೊಂದಿತ್ತು, ಆದರೆ ಇದು ಇಂದು ಬದಲಾಗಿದ್ದು, 'ಉದ್ಯೋಗಂ ಸರ್ವ ಲಕ್ಷಣಂ' ಎಂದು ಬದಲಾಗಿದೆ ಎಂದರೆ ತಪ್ಪಾಗದು. ಏಕೆಂದರೆ ಇಂದು ಉದ್ಯೋಗವು ಕೇವಲ ಪುರುಷರಿಗಷ್ಟೇ ಅಲ್ಲದೇ ಮಹಿಳೆಯರಿಗೂ ಅತ್ಯಂತ ಅನಿವಾರ್ಯವಾಗಿದೆ. ಉದ್ಯೋಗವೇನೋ ಎಲ್ಲರಿಗೂ ಬೇಕು ಆದರೆ ಉದ್ಯೋಗದ ಆಳವನ್ನು ಮತ್ತು ಉದ್ಯೋಗದಾತನ ಆಶಯಗಳನ್ನು ಅರಿತು ಕೆಲಸ ಮಾಡುವ ಕೆಲಸಗಾರರು ಎಷ್ಟು ಮಂದಿ ಇದ್ದಾರೆ ಎಂದು ವ್ಯವಸ್ಥೆಯ ಒಳಗೆ ಅಧ್ಯಯನ ಏನಾದರೂ ಮಾಡಿದರೆ ಸಿಗುವ ಉತ್ತರವು ನಿರಾಶಾದಾಯಕ ಆಗಿರಬಹುದು.



ಏಕೆಂದರೆ ಎಲ್ಲರಿಗೂ ಉದ್ಯೋಗ ಅತ್ಯಂತ ಅಗತ್ಯವಾಗಿ ಬೇಕು, ಉದ್ಯೋಗದಾತನು ನೀಡುವ ಸಂಬಳವಂತೂ ಬೇಕೇ ಬೇಕು, ಆದರೆ ಉದ್ಯೋಗದಾತನು ನೀಡುವ ಸಂಬಳಕ್ಕೆ ನೀಡುವ ಕೆಲಸದ ರೂಪದ ಪ್ರತಿಫಲದ ಕುರಿತು ಯೋಚಿಸುವವರು ತೀರಾ ವಿರಳ. ಸಾಮಾನ್ಯವಾಗಿ ಕೆಲಸಗಾರರಲ್ಲಿ ಪ್ರತಿದಿನವೂ ಬೆಳಗಾಗಿ ಮಧ್ಯಾಹ್ನವಾದರೆ ಸಾಕು, ಸಂಜೆಯಾದರೆ ಸಾಕಪ್ಪಾ ಎನ್ನುವ ಮನೋಭಾವ ಇರುತ್ತದೆ. ಬೆಳಗಿನಿಂದ ಸಂಜೆಯ ನಡುವಿನ ಕೆಲಸದ ಅವಧಿಯಲ್ಲಿ ಕೆಲಸಗಾರನಾಗಿ ನಾನು ಮಾಡಿದ ಕೆಲಸಗಳೇನು? ಉದ್ಯೋಗದಾತನ ಆಶಯಗಳನ್ನು ಕೆಲಸಗಾರನಾಗಿ ನಾನು ತಕ್ಕಮಟ್ಟಿಗಾದರೂ ಈ ದಿನ ಪೂರೈಸಿದ್ದೇನೆಯೇ? ನನಗೆ ನೀಡುವ ಸಂಬಳಕ್ಕೆ ಪ್ರತಿಯಾಗಿ ನಾನು ನನಗೆ ನೀಡಿದ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿಭಾಯಿಸುವ ಮೂಲಕ ನನ್ನ ಉದ್ಯೋಗದಾತನಿಗೆ ನಾನು ಸಹಾಯ ಮಾಡಿದ್ದೇನೆಯೇ ಎಂದು ಯಾವ ಕೆಲಸಗಾರನೂ ಯೋಚನೆಯನ್ನು ಮಾಡುವುದಿಲ್ಲ. ಆದರೆ ಸಮಯಕ್ಕೆ ಸರಿಯಾಗಿ ಸಂಬಳ ಬರಲೇ ಬೇಕು, ಲಭಿಸಬೇಕಾದ ಸೌಲಭ್ಯಗಳು ಮತ್ತು ಭತ್ತೆಗಳು ದೊರೆಯಲೇ ಬೇಕು ಎಂಬ ಅಪೇಕ್ಷೆಯಷ್ಟೇ ಇರುತ್ತದೆ.

ಹೆಚ್ಚಿನ ಕೆಲಸಗಾರರಲ್ಲಿ 'ಹಾಕಿದ ಊಟ, ಮಾಡಿದ ಕೆಲಸ' ಎನ್ನುವ ಗಾದೆಯ ಮನಃಸ್ಥಿತಿಯೇ ಇರುತ್ತದೆ. ಅಂದರೆ ಉದ್ಯೋಗದಾತ ನನಗೆಷ್ಟು ಸಂಬಳವನ್ನು ಕೊಡುತ್ತಾನೋ ಅದಕ್ಕೆ ಸರಿಯಾದ ಮೌಲ್ಯವಿರುವ ಕೆಲಸವನ್ನು ಮಾತ್ರ ನಾನು ಮಾಡಬೇಕು (ಉದಾ: ಸಂಸ್ಥೆಯು ದಿನಕ್ಕೆ ರೂ.250/– ಸಂಬಳ ನೀಡಿದರೆ, ಅಷ್ಟೇ ಮೌಲ್ಯವಿರುವ ಕೆಲಸವನ್ನು ನಾನು ಮಾಡಬೇಕು, ಹೆಚ್ಚುವರಿ ಕೆಲಸ ಮಾಡಬಾರದು) ಎನ್ನುವ ಧೋರಣೆ ಇರುತ್ತದೆ. ಅದರ ಜೊತೆಗೆ 'ಪ್ರತಿ ಕ್ಷಣವೂ ಗಡಿಯಾರವನ್ನು ನೋಡಿಕೊಂಡು ಸಮಯಕ್ಕಷ್ಟೇ ಮಹತ್ವವನ್ನು ಕೊಡುತ್ತಾ ದಿನದ ಕೆಲಸದ ಅವಧಿಯನ್ನು ವ್ಯರ್ಥ–'ರ್ವಾಗಿ ಕಳೆಯುತ್ತಾ ಇರುತ್ತಾರೆ ಮತ್ತು ಸಮಯಕ್ಕೆ ಸರಿಯಾಗಿ ಸಂಬಳವನ್ನು ಅಪೇಕ್ಷಿಸುತ್ತಾರೆ. ಈ ಗುಣವು ಒಳ್ಳೆಯದಲ್ಲ ಮತ್ತು ಇಂತಹ ವ್ಯಕ್ತಿಗಳು ಸಂಸ್ಥೆಯ ಒಳಗಡೆ ಕೇವಲ ಕಾರ್ಮಿಕರಾಗಿಯೇ ಉಳಿದು ಬಿಡುತ್ತಾರೆ. ಯಾರು ಸಮಯ ಮತ್ತು ತನಗೆ ಲಭಿಸುವ ಸಂಬಳದ ಮಿತಿಯನ್ನು ನೋಡದೇ ಇದು ನನ್ನ ಜವಾಬ್ದಾರಿ, ನನಗೆ ನೀಡಿದ ಜವಾಬ್ದಾರಿಯನ್ನು ನಾನು ಅಚ್ಚುಕಟ್ಟಾಗಿ ನಿಭಾಯಿಸಬೇಕು ಎನ್ನುವ ಯೋಚನೆಯೊಂದಿಗೆ ಕೆಲಸ ಮಾಡುತ್ತಾರೋ ಅವರು ವ್ಯವಸ್ಥೆಯ ಒಳಗಡೆ ಮಾಲೀಕರಾಗಿ ಬೆಳೆಯುತ್ತಾರೆ.'



ಲೇಖನ
■ ಸಂತೋಷ್ ರಾವ್ ಪೆರ್ಮುಡ
ಪೆರ್ಮುಡ ಮನೆ ಪಟ್ರಮೆ ಗ್ರಾಮ ಮತ್ತು ಅಂಚೆ
ಬೆಳ್ತಂಗಡಿ ತಾಲೂಕು ದ.ಕ ಜಿಲ್ಲೆ–574198. ದೂ: 9742884160



# ಗೋಪಾಲ ಗೌರವ ಪ್ರಶಸ್ತಿಗೆ ವೀರಶೆಟ್ಟಿ ಖ್ಯಾಮಾ ಭಾಜನ




ಬೀದರ್: ಗೋ ಸೇವೆ ಹಾಗೂ ಸಮಾಜ ಸೇವೆಯಲ್ಲಿ ಕಳೆದ ಒಂದು ದಶಕದಿಂದ ಸಕ್ರಿಯವಾಗಿ ತೊಡಗಿಸಿಕೊಂಡಿರುವ ವಿಶ್ವ ಹಿಂದೂ ಪರಿಷತ್ ಬೀದರ್ ಜಿಲ್ಲಾಧ್ಯಕ್ಷ ವೀರಶೆಟ್ಟಿ ಖ್ಯಾಮಾ ಅವರಿಗೆ ಪ್ರತಿಷ್ಠಿತ 'ಗೋಪಾಲ ಗೌರವ' ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಲಾಯಿತು.

ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲೂಕಿನ ಭಾನುಳಿಯಲ್ಲಿರುವ ಶ್ರೀರಾಮಚಂದ್ರಾಪುರ ಮಠದ ರಾಮದೇವ ಗೋಸ್ವರ್ಗದಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಶ್ರೀ ರಾಘವೇಶ್ವರ ಭಾರತಿ ಸ್ವಾಮೀಜಿ ಅವರು ಪ್ರಶಸ್ತಿ ನೀಡಿ ಆಶೀರ್ವದಿಸಿದರು.

ಮಠದ ಅಧೀನದ ಕಾಮದುಘಾ ಟ್ರಸ್ಟ್ ಹಾಗೂ ಮುಂಬೈನ ದಿನೇಶ್ ಶಹರಾ ಫೌಂಡೇಶನ್ ವತಿಯಿಂದ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು, ಪ್ರಶಸ್ತಿಯೊಂದಿಗೆ ರೂ.10 ಸಾವಿರ ನಗದು ಹಾಗೂ ಸ್ಮರಣಿಕೆ ಫಲಕ ನೀಡಲಾಯಿತು. ಈ ಬಾರಿ ಖ್ಯಾಮಾ ಸೇರಿದಂತೆ ನಾಲ್ವರು ಈ ಗೌರವಕ್ಕೆ ಆಯ್ಕೆಯಾಗಿದ್ದರು.

ಈ ಸಂದರ್ಭದಲ್ಲಿ ರಾಘವೇಶ್ವರ ಭಾರತಿ ಸ್ವಾಮೀಜಿ ಮಾತನಾಡಿ, ಗೋ ಸೇವೆ ಮತ್ತು ಸಮಾಜ ಸೇವೆಯಲ್ಲಿ ತೊಡಗಿರುವವರನ್ನು ಪ್ರೋತ್ಸಾಹಿಸುವುದು ಸಮಾಜದ ಕರ್ತವ್ಯವಾಗಿದ್ದು, ಬೀದರ್ ಗಡಿಭಾಗದಲ್ಲಿ ಖ್ಯಾಮಾ ಅವರು ಸಲ್ಲಿಸುತ್ತಿರುವ ಸೇವೆ ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಪ್ರಶಸ್ತಿ ಸ್ವೀಕರಿಸಿದ ಬಳಿಕ ವೀರಶೆಟ್ಟಿ ಖ್ಯಾಮಾ ಅವರು ಮಾತನಾಡಿ, ದೇಶದ ಧಾರ್ಮಿಕ, ಆಧ್ಯಾತ್ಮಿಕ, ಪರಿಸರ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಶ್ರೀಗಳ ಸೇವೆ ಅಪ್ರತಿಮವಾಗಿದೆ. ಭಾನುಳಿಯಲ್ಲಿ ವಿಶ್ವದಲ್ಲೇ ಅಪರೂಪವಾದ ಗೋಸ್ವರ್ಗ ನಿರ್ಮಿಸಿ ಭಾರತೀಯ ಸಂಸ್ಕೃತಿ ಹಾಗೂ ಗೋ ಸಂರಕ್ಷಣೆಯ ಮಹತ್ವವನ್ನು ಸಮಾಜಕ್ಕೆ ಪರಿಚಯಿಸುತ್ತಿರುವ ಶ್ರೀಗಳ ಸೇವೆ ಅವಿಸ್ಮರಣೀಯವಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಡಾ. ವೈ.ವಿ. ಕೃಷ್ಣಮೂರ್ತಿ, ಮಧು ಗೋಮತಿ, ಈಶ್ವರಿ ಭಟ್, ಹರಿಪ್ರಸಾದ ಪೆರಿಯಪ್ಪು, ಮಹೇಶ ಚಟ್ನಳ್ಳಿ, ಚಂದನ್ ಶಾಸ್ತ್ರಿ, ರಾಜೇಶ್ವರಿ ವೀರಶೆಟ್ಟಿ ಖ್ಯಾಮಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.




# ಲಿಟ್ಲ್ ಫ್ಲಾವರ್ ಶಾಲೆಯಲ್ಲಿ ಸನ್ಮಾನ:ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಸಾಧನೆ ಶ್ಲಾಘನೀಯ: ಅಮ್ಮಣ್ಣ

ಬೀದರ್: ಗ್ರಾಮೀಣ ಭಾಗದಲ್ಲಿ ವಿದ್ಯಾರ್ಥಿಗಳ ಸಾಧನೆ ಶ್ಲಾಘನೀಯ ಎಂದು ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ಬಸವರಾಜ್ ಅಮ್ಮಣ್ಣ ಅವರು ಹೇಳಿದರು.

ತಾಲ್ಲೂಕಿನ ಯಾಕತಪೂರ್ ಗ್ರಾಮದ ಲಿಟ್ಲ್ ಫ್ಲಾವರ್ ಪ್ರೌಢ ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಲಿಟ್ಲ್ ಫ್ಲಾವರ್ ಶಾಲೆಯ ವಿದ್ಯಾರ್ಥಿಗಳ ಸಾಧನೆ ನೋಡಿದರೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ನಗರ ಪ್ರದೇಶದ ವಿದ್ಯಾರ್ಥಿಗಳಿಗಿಂತ ಯಾವುದರಲ್ಲೂ ಕಮ್ಮಿಯಿಲ್ಲ ಎಂಬುದು ಸಾಬೀತಾಗುತ್ತದೆ. ಎಸ್ಸೆಸ್ಸೆಲ್ಸಿ ಪಾಸಾದ ವಿದ್ಯಾರ್ಥಿಗಳು ಮುಂದಿನ ಶೈಕ್ಷಣಿಕ ಜೀವನದಲ್ಲಿ ಉನ್ನತ ಗುರಿ ಸಾಧಿಸಬೇಕು ಎಂದು ಆಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಸೈಯದ್ ಅಹ್ಮದ್ ಮುದ್ದೆ ಮಾತನಾಡಿ, ವಿದ್ಯಾರ್ಥಿಗಳ ಈ ಸಾಧನೆಗೆ ಪೋಷಕರ ಹಾಗೂ ಶಿಕ್ಷಕ ವೃಂದದ ಸಹಕಾರ ಅಪಾರವಾಗಿದೆ. ಅದೇ ರೀತಿ, ಪ್ರತಿ ವರ್ಷದಂತೆ ಈ ವರ್ಷವೂ ಸಂಸ್ಥೆಯ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ದೆಹಲಿ, ಆಗ್ರಾಗೆ ವಿಮಾನದ ಮೂಲಕ ಉಚಿತವಾಗಿ ಪ್ರವಾಸಕ್ಕೆ ಕರೆದೊಯ್ಯಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಜು ಕೋಳಿ, ಮಲ್ಲಿಕಾರ್ಜುನ ಶೇರಿಕಾರ, ಹುಸ್ಸೈನಿ ಜಿಂದೆ ಅವರು ಉಪಸ್ಥಿತರಿದ್ದು ವಿದ್ಯಾರ್ಥಿಗಳಿಗೆ ಶುಭ ಕೋರಿದರು. ಪ್ರಾಂಶುಪಾಲರಾದ ಆಶಿಯಾ ಅಂಜುಂ, ಶಿಕ್ಷಕರಾದ ಶಾಹಿದ್, ಚಾಂದಪಾಷಾ, ಕೃಷ್ಣ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಬುದ್ಧ-ಬಸವ-ಅಂಬೇಡ್ಕರ್ ಸಮಾನತಾ ಸಿದ್ಧಾಂತ ಗಟ್ಟಿಗೊಳಿಸುವುದೇ ಗುರಿ: ಡಾ. ಸಿದ್ದರಾಮ ಶರಣರು



ಬೀದರ್: ಬುದ್ಧ, ಬಸವ ಮತ್ತು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಸಮಾನತಾ ಸಿದ್ಧಾಂತಗಳನ್ನು ಸಮಾಜದಲ್ಲಿ ಗಟ್ಟಿಗೊಳಿಸುವುದೇ ತಮ್ಮ ಗುರಿ ಎಂದು ರಾಷ್ಟ್ರೀಯ ಬಸವ ಪುರಸ್ಕಾರ ಪುರಸ್ಕೃತರಾದ ಡಾ. ಸಿದ್ದರಾಮ ಶರಣರು ಬೆಲ್ದಾಳ್ ಅವರು ಹೇಳಿದರು.

ಬುದ್ಧ ಬೆಳಕು ಸಾಮಾಜಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್, ಬೀದರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಸೋಮವಾರ ಸಂಜೆ ನಗರದ ಡಾ. ಚೆನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಜರುಗಿದ ಡಾ. ಬಿ.ಆರ್. ಅಂಬೇಡ್ಕರ್ ಕುರಿತು ವಿಚಾರಗೋಷ್ಠಿ, ಸಾಂಸ್ಕೃತಿಕ ಸಂಭ್ರಮ, ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯಚಟುವಟಿಕೆಗಳ ಚಾಲನೆ ಹಾಗೂ ಪಿಯುಸಿ ಪರೀಕ್ಷೆಯಲ್ಲಿ 75 ಶೇಕಡಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿ–ವಿದ್ಯಾರ್ಥಿನಿಯರ ಅಭಿನಂದನಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ತ್ರಿರತ್ನರ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸರಳ ಹಾಗೂ ವೈಚಾರಿಕ ಬದುಕು ನಡೆಸಬೇಕು, ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು. ಭಂತೆ ಸಂಘ ರಖ್ಖಿತ್ ಆಣದೂರ ಸಾನಿಧ್ಯ ವಹಿಸಿದ್ದರು.

ಶಾಹೀನ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಅಬ್ದುಲ್ ಖದಿರ್ ಅವರು ತಮಟೆ ಬಾರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಡಾ. ಅಂಬೇಡ್ಕರ್ ತೋರಿದ ಶಿಕ್ಷಣದ ದಾರಿಯಲ್ಲಿ ನಡೆದರೆ ಪ್ರಬುದ್ಧ ಭಾರತ ನಿರ್ಮಾಣ ಸಾಧ್ಯ ಎಂದು ಹೇಳಿದರು. ಬಡವರು ಮತ್ತು ಕಾರ್ಮಿಕರು ಆಡಂಬರದ ಮದುವೆ ಹಾಗೂ ಅನಾವಶ್ಯಕ ಖರ್ಚುಗಳನ್ನು ಕಡಿಮೆ ಮಾಡಿ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು ಎಂದು ಸಲಹೆ ನೀಡಿದರು.

ಗುರುಪಾದಪ್ಪ ನಾಗಮಾರಪಳ್ಳಿ ಆಸ್ಪತ್ರೆಯ ಅಧ್ಯಕ್ಷ ಹಾಗೂ ಯುವ ನಾಯಕ ತರುಣ ನಾಗಮಾರಪಳ್ಳಿ ಅವರು ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯಚಟುವಟಿಕೆಗಳಿಗೆ ಚಾಲನೆ ನೀಡಿ ಮಾತನಾಡಿ, ಬುದ್ಧ–ಬಸವ–ಅಂಬೇಡ್ಕರ್ ಸಮಾನತಾ ತತ್ವದ ಕಾರ್ಯಕ್ರಮಗಳಿಗೆ ನಾಗಮಾರಪಳ್ಳಿ ಕುಟುಂಬ ಸದಾ ಸಹಕಾರ ನೀಡುತ್ತದೆ ಎಂದರು. ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಅಧ್ಯಕ್ಷ ಡಾ. ಲಕ್ಷ್ಮಣ ದಸ್ತಿ ಅವರು ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಮತದಾನದ ಹಕ್ಕು ವಿಷಯ ಮಂಡಿಸಿ, 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕು ಅಂಬೇಡ್ಕರ್ ಹೋರಾಟದ ಫಲವಾಗಿದೆ ಎಂದು ತಿಳಿಸಿದರು. ಅಂಬೇಡ್ಕರ್ ದಲಿತ ಸೂರ್ಯ ಮಾತ್ರವಲ್ಲ, ಭವ್ಯ ಭಾರತದ ನಿರ್ಮಾತೃ ಮತ್ತು ವಿಶ್ವಸೂರ್ಯ ಎಂದು ಬಣ್ಣಿಸಿದರು.

ಜವಾಹರಲಾಲ್ ನೆಹರು ನವೋದಯ ವಿದ್ಯಾಲಯ, ನಾರಾಯಣಪೂರದ ಶಿಕ್ಷಕ ಧರ್ಮಣ್ಣ ಚಿಟ್ಟಾ ಅವರು ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಶಿಕ್ಷಣ ವಿಷಯ ಮಂಡಿಸಿ, ಶಿಕ್ಷಣದ ಮೂಲಕ ಇತಿಹಾಸ ನಿರ್ಮಿಸಿದ ಮಹಾನಾಯಕ ಅಂಬೇಡ್ಕರ್ ಅವರನ್ನು ವಿದ್ಯಾರ್ಥಿಗಳು ಆದರ್ಶವಾಗಿ ತೆಗೆದುಕೊಳ್ಳಬೇಕು ಎಂದು ಹೇಳಿದರು. ಅಧ್ಯಕ್ಷತೆಯನ್ನು ಮನೆ ಮನೆಗೆ ಅಂಬೇಡ್ಕರ್ ಅಭಿಯಾನದ ಅಧ್ಯಕ್ಷ ಡಾ. ಕಾಶಿನಾಥ ಚೆಲ್ವಾ ಅವರು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಮರಾಠಾ ಸಮಾಜದ ಪೂಜ್ಯ ದಾದಾ ಮಹಾರಾಜ ನಗರಕರ್, ಡಾ. ಬಾಬು ಜಗಜೀವನರಾಮ ಚರ್ಮ ಕೈಗಾರಿಕಾ ನಿಗಮ ಅಧ್ಯಕ್ಷ ಮುಂಡರಗಿ ನಾಗರಾಜ್, ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕ ಮಾರುತಿ ಬೌದ್ಧೆ, ಲಾಲಪ್ಪ ಕುದರೆ ಚ್ಯಾರಿಟೆಬಲ್ ಮತ್ತು ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ಶಂಭುಲಿಂಗ ಕುದರೆ, ಕಾರಂಜಾ ರೈತ ಸಂತ್ರಸ್ತರ ಹೋರಾಟ ಸಮಿತಿ ಅಧ್ಯಕ್ಷ ಚಂದ್ರಶೇಖರ ಪಾಟೀಲ್, ಗ್ರಾಮೀಣ ಕೂಲಿಕಾರ್ಮಿಕರ ಸಂಘಟನೆ ಸಂಚಾಲಕಿ ಸಪ್ನಾದೀಪಾ ಭಾವಿಮನಿ, ಸಾಮಾಜಿಕ ಕಾರ್ಯಕರ್ತ ಜಗದೀಶ್ವರ ಬಿರಾದರ್, ಶಾಂತಿಕ್ರಾಂತಿ ಪೀಠ ಅಧ್ಯಕ್ಷ ಓಂಪ್ರಕಾಶ ರೊಟ್ಟೆ ಅವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ರಾಷ್ಟ್ರಮಟ್ಟದಲ್ಲಿ ಸಾಂಸ್ಕೃತಿಕ ವಿಭಾಗದಲ್ಲಿ ತೃತೀಯ ಸ್ಥಾನ ಪಡೆದ ಎಂ.ಎಸ್. ಮನೋಹರ್ ಹಾಗೂ ಸಂಗಡಿಗರು, ಮುಖ್ಯಮಂತ್ರಿ ಪದಕ ಪುರಸ್ಕೃತ ಸಂತೋಷ ಮಹಾರಾಜ್ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು. ಮಹೇಶ್ ಗೋರನಾಳಕರ್ ಅವರು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಲ್ಲಿಕಾರ್ಜುನ್ ಟಂಕಸಾಲೆ ಅವರು ಹಾಸ್ಯ ಸಂಜೆ ನಡೆಸಿಕೊಟ್ಟರು. ತುಕಾರಾಮ್ ಭೋಲೆ ಅವರು ಜಾನಪದ ಜಾದು ಕಾರ್ಯಕ್ರಮ ನಡೆಸಿಕೊಟ್ಟರು. ಸಾಂಸ್ಕೃತಿಕ ಸಂಭ್ರಮದಲ್ಲಿ ಶಿವರಾಜ ತಡಪಳ್ಳಿ ಮತ್ತು ಸಂಗಡಿಗರು ಕ್ರಾಂತಿ ಗೀತೆಗಳು, ಸಂತೋಷ ಪೂಜಾರಿ ಮತ್ತು ಸಂಗಡಿಗರು ನಿಜಂಪೂರ ಜಾನಪದ ಹಾಡುಗಳು, ಗಂಗಮ್ಮ ಫೂಲೆ ಅಂಬೇಡ್ಕರ್ ಭಜನೆಗಳು, ಪುನೀತಾ ಗಾಯಕವಾಡ ಮತ್ತು ಸಂಗಡಿಗರು ಬುದ್ಧ–ಭೀಮರ ಗೀತೆಗಳು, ಕರ್ನಾಟಕ ಪಂಚಶೀಲ ಕಲಾ ಸಾಹಿತ್ಯ ಪರಿಷತ್ತಿನ ಅರ್ಜುನ ಕಾಂಚೆ ಮತ್ತು ಸಂಗಡಿಗರು ಭಾವಗೀತೆಗಳನ್ನು ನಡೆಸಿಕೊಟ್ಟರು.

# ಉಪನ್ಯಾಸಕನ ಪುತ್ರಿ ನಾಪತ್ತೆ: ಪ್ರಿಯಕರನೊಂದಿಗೆ ಪರಾರಿ ಶಂಕೆ

ಕಲಬುರ್ಗಿ: ಉಪನ್ಯಾಸಕರೊಬ್ಬರ ಪುತ್ರಿ ಮನೆಯಿಂದ ನಾಪತ್ತೆಯಾದ ಘಟನೆ ನಗರದ ಕುಸನೂರು ರಸ್ತೆಯಲ್ಲಿರುವ ತಿಲಕ ನಗರದಲ್ಲಿ ವರದಿಯಾಗಿದೆ. ಯುವತಿಯು ಪ್ರಿಯಕರನೊಂದಿಗೆ ಪರಾರಿಯಾಗಿರುವ ಶಂಕೆ ಇದೆ.

ಉಪನ್ಯಾಸಕ ತುಳಜರಾಮ್ ತಂದೆ ತುಕಾರಾಮ್ ಗಾಯದನ್ನರ್ ಅವರ ಪುತ್ರಿ ಪ್ರಗತಿ ಕಾಣೆಯಾಗಿದ್ದಾಳೆ. ಕಳೆದ 22ರಂದು ಬೆಳಿಗ್ಗೆ ಪ್ರತೀಕ್ಷಾಳು ತನ್ನ ಮೊಬೈಲ್‌ನಲ್ಲಿ ನಿಖಿಲ ತಂದೆ ರಾಜು ಜೊತೆಗೆ ಮಾತನಾಡುತ್ತಿರುವುದನ್ನು ತಂದೆ ನೋಡಿ, ಆಕೆಗೆ ಹಾಗೆಲ್ಲ ಹುಡುಗರ ಜೊತೆ ಮಾತನಾಡಬಾರದು ಎಂದು ಬೈದು ಆಕೆ ಬಳಸುತ್ತಿದ್ದ ಸಿಮ್ ಕಾರ್ಡ್‌ನ್ನು ಆಕೆಯ ಮೊಬೈಲ್‌ನಿಂದ ತೆಗೆದು ತನ್ನ ಬಳಿ ಇಟ್ಟುಕೊಂಡರು. ಮಧ್ಯಾಹ್ನದ ಸುಮಾರಿಗೆ ಯಾರಿಗೂ ಹೇಳದೇ ಕೇಳದೇ ಪ್ರಗತಿ ಮನೆಯಿಂದ ಹೊರಗಡೆ ಹೋಗಿದ್ದು, ಮರಳಿ ಬಾರದೇ ಇದ್ದಾಗ ಎಲ್ಲ ಕಡೆಗೆ ಹುಡುಕಾಡಿದರೂ ಸಹ ಸಿಗಲಿಲ್ಲ. ಹೀಗಾಗಿ ಪುತ್ರಿಯನ್ನು ಪತ್ತೆ ಹಚ್ಚಿಕೊಡಲು ತಂದೆ ದೂರು ಸಲ್ಲಿಸಿದ್ದು, ಈ ಕುರಿತು ವಿಶ್ವವಿದ್ಯಾಲಯ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವೀರಶೈವ ಲಿಂಗಾಯತ ಮಹಾಸಭಾ ಚುನಾವಣೆ

ಬೀದರ್: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಹಾಗೂ ಭಾಲ್ಕಿ ತಾಲ್ಲೂಕು ಘಟಕದ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಸಮಿತಿ ಸದಸ್ಯರ ಸ್ಥಾನಗಳಿಗೆ ಮೇ 24 ರಂದು ನಗರದ ವಿದ್ಯಾನಗರ ಕಾಲೊನಿಯ ಮೈಲೂರು ರಸ್ತೆಯಲ್ಲಿನ ಬಾಂಬೆ ಬಿಲ್ಡಿಂಗ್ ಸಮೀಪದ ಶ್ರೀಮತಿ ಲಕ್ಷ್ಮೀಬಾಯಿ ಕಮಠಾಣೆ ಬಿ.ಎಡ್. ಕಾಲೇಜಿನಲ್ಲಿ ಚುನಾವಣೆ ನಡೆಯಲಿದೆ ಎಂದು ಮಹಾಸಭಾ ಜಿಲ್ಲಾ ಚುನಾವಣಾಧಿಕಾರಿ ಶಿವರಾಜ್ ರೊಟ್ಟೆ ಅವರು ತಿಳಿಸಿದ್ದಾರೆ.

ಏಪ್ರಿಲ್ 29ಕ್ಕೆ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಆರಂಭವಾಗಲಿದೆ. ಮೇ 6 ನಾಮಪತ್ರ ಪಡೆಯಲು ಕೊನೆಯ ದಿನವಾಗಿದೆ. ಮೇ 7ರಂದು ನಾಮಪತ್ರಗಳ ಪರಿಶೀಲನೆ, ಮೇ 10 ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದೆ. ಮೇ 24 ರಂದು ಬೆಳಿಗ್ಗೆ 10 ರಿಂದ ಸಂಜೆ 4 ರ ವರೆಗೆ ಚುನಾವಣೆ ನಡೆಯಲಿದೆ. ಮತದಾನ ಪೂರ್ಣಗೊಂಡ ನಂತರ ಮತ ಎಣಿಕೆ ಜರುಗಲಿದೆ. ಸ್ಪರ್ಧಾ ಆಕಾಂಕ್ಷಿಗಳು ಶ್ರೀಮತಿ ಲಕ್ಷ್ಮೀಬಾಯಿ ಕಮಠಾಣೆ ಬಿ.ಎಡ್. ಕಾಲೇಜಿನಲ್ಲಿ ನಾಮಪತ್ರದ ಅರ್ಜಿಗಳನ್ನು ಪಡೆಯಬಹುದು ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ.

# ಪ.ಜಾತಿ-ವರ್ಗ ಜನರ ಸಮಸ್ಯೆಗಳ ಪರಿಹಾರಕ್ಕೆ ಕಟ್ಟುನಿಟ್ಟಿನ ಕ್ರಮ

## ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರಾದ ಡಾ.ಮೂರ್ತಿ.ಎಲ್ ಭರವಸೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳಿಗೆ ಸಂಬಂಧಿಸಿದಂತೆ ರಾಜ್ಯಾದ್ಯಂತ ಅನೇಕ ಸಮಸ್ಯೆಗಳಿದ್ದು ಅಂತಹ ಸಮಸ್ಯೆಗಳನ್ನು ಆಯೋಗವು ಗಂಭೀರವಾಗಿ ಆಲಿಸಿ ಅವುಗಳಿಗೆ ಪರಿಹಾರ ಒದಗಿಸಲು ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಿದೆ ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರಾದ ಡಾ.ಮೂರ್ತಿ.ಎಲ್ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳ ಕುಂದು ಕೊರತೆಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭೂವ್ಯಾಜ್ಯ, ಅಟ್ರಾಸಿಟಿ, ನಕಲಿ ಜಾತಿ ಪ್ರಮಾಣ ಪತ್ರ ಸೇರಿದಂತೆ ವಿವಿಧ ಸಮಸ್ಯೆಗಳನ್ನು ಪರಿಗಣಿಸಲು ಅಧಿಕಾರಿಗಳು ಆಯೋಗದ ಜೊತೆಗೂಡಿ ಸರಿಪಡಿಸಬೇಕು. ಈ ಕಾರ್ಯವನ್ನು ರಾಜ್ಯಾದ್ಯಾಂತ ಚುರುಕುಗೊಳಿಸಲಾಗುವುದು ಎಂದರು.

ಪ್ರಕರಣಗಳ ವಿಳಂಬಕ್ಕೆ ಕಾರಣ ಸಂಪೂರ್ಣ ಅವಲೋಕನ ಮಾಡಿಕೊಂಡು ಸಮತೋಲನ ವಹಿಸಿ ಫಲಾನುಭವಿಗಳಿಗೆ ನ್ಯಾಯ ಕಲ್ಪಿಸಬೇಕು ಎಂದರು. ಈಗಾಗಲೇ

3850 ಪ್ರಕರಣಗಳ ಕಾರ್ಯ ನಡೆದಿದೆ. 4500 ಅರ್ಜಿಗಳನ್ನು ಸ್ವೀಕರಿಸಲಾಗಿದೆ ಎಂದ ಅವರು, ಕಳೆದ ಆರು ತಿಂಗಳಿಂದ ಪ್ರತಿ ಗುರುವಾರ ಹಾಗೂ ಶುಕ್ರವಾರ ಆಲಿಸಿ, 300 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ಇತ್ಯರ್ಥಪಡಿಸಲಾಗಿದೆ ಎಂದರು.

ಒಟ್ಟಾರೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಸಮಸ್ಯೆಗಳನ್ನು ಆಲಿಸಿ ಆ ಸಮಸ್ಯೆಗಳನ್ನು ಶಾಶ್ವತ ಪರಿಹಾರ ಕಲ್ಪಿಸುವ ಕಾರ್ಯವನ್ನು ಆಯೋಗದಿಂದ ಮಾಡಲು ಪ್ರಯತ್ನಿಸಲಾಗುವುದು ಎಂದರು.

ಇಂದಿನ ಸಭೆಯಲ್ಲಿ ಸ್ವೀಕರಿಸಲಾದ ದೂರು, ನ್ಯೂನತೆಗಳನ್ನು ಆಯೋಗ ಗಂಭೀರವಾಗಿ ಪರಿಗಣಿಸಿ ಅವುಗಳಿಗೆ ತ್ವರಿತ ಪರಿಹಾರ ಕಲ್ಪಿಸಲಾಗುವುದು. ಅಲ್ಲದೇ ವಿವಿಧ ಜಿಲ್ಲೆಗಳಲ್ಲಿ ಆಲಿಸಿದ ಹಾಗೂ ಸ್ವೀಕರಿಸಲಾದ ಅಹವಾಲುಗಳ ಕುರಿತ ವರದಿಯನ್ನು ಮುಖ್ಯಮಂತ್ರಿಗಳಿಗೆ ಶೀಘ್ರದಲ್ಲಿಯೇ ಸಲ್ಲಿಸಲಾಗುವುದು ಎಂದು ಆಯೋಗದ ಅಧ್ಯಕ್ಷರಾದ ಡಾ.ಮೂರ್ತಿ.ಎಲ್. ತಿಳಿಸಿದರು.

ಸಮಾಜ ಮುಖಂಡ ಅಭಿಷೇಕ ಚಕ್ರವರ್ತಿ ಮಾತನಾಡಿ, ಭೂ ಒಡೆತನ, ಹೆಚ್ಚುವರಿ ಜಮೀನು ಸಮಸ್ಯೆಗಳಿವೆ. ಮುಗ್ಧ ಜನರು ಜಮೀನು ಕಳೆದುಕೊಂಡ ಪ್ರಕರಣಗಳಿವೆ. ಅಂತಹ ಪ್ರಕರಣಗಳನ್ನು ಆಯೋಗ ಗಂಭೀರವಾಗಿ ಪರಿಗಣಿಸಿ, ಆ ಪ್ರಕರಣಗಳಿಗೆ ನ್ಯಾಯ ಕಲ್ಪಿಸಬೇಕು ಎಂದು ಆಯೋಗದ ಅಧ್ಯಕ್ಷರನ್ನು ಕೋರಿದರು.

ಅಸ್ಪೃಶ್ಯತೆ ನಿವಾರಣೆಗೆ ಸಾಕಷ್ಟು ಜಾಗೃತಿ ಮೂಡಿಸಬೇಕು. ಅದಕ್ಕೆ ವಿಶೇಷ ಮುತುವರ್ಜಿ ವಹಿಸಬೇಕು. ಈ ವರ್ಗದವರಿಗಿರುವ



ಸೌಲಭ್ಯ ದೊರಕಿಸಿಕೊಡಬೇಕು. ಈ ಜನಾಂಗದ ಅಭಿವೃದ್ಧಿ ಹಾಗೂ ಸಮಸ್ಯೆಗಳನ್ನು ಕಾನೂನು ರೀತ್ಯ ಇತ್ಯರ್ಥಪಡಿಸಬೇಕು ಎಂದೂ ಆಗ್ರಹಿಸಿದರು. ರಾಜಶೇಖರ ಕೂಚಬಾಳ ಮಾತನಾಡಿ, ಪೌರ ಕಾರ್ಮಿಕರಿಗೆ ಸಮರ್ಪಕ ವೇತನ ನೀಡಲು ಕ್ರಮ ವಹಿಸಬೇಕು.

ಇದಕ್ಕೆ ಪ್ರತಿಕ್ರಿಯಿಸಿದ ಅಧ್ಯಕ್ಷರು,ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡುವುದಾಗಿ ಭರವಸೆ ನೀಡಿದರು.

ಸಂಜು ಕಂಬಾಗಿ ಮಾತನಾಡಿ, ಗಾಂವಠಾಣ ಜಾಗದಲ್ಲಿ ನಿರ್ಮಾಣ ಮಾಡಿಕೊಂಡಿದ್ದು, ಅನುಕೂಲ ಮಾಡಿಕೊಡಬೇಕು ಎಂಬ ಮನವಿಗೆ

ಆಯೋಗದಿಂದ ನ್ಯಾಯ ಕೊಡಿಸುವ ಭರವಸೆಯನ್ನು ಅಧ್ಯಕ್ಷರು ನೀಡಿದರು.

ರಾವುತ್ ತಳಕೇರಿ ಮಾತನಾಡಿ, ಸರ್ಕಾರದ ಯೋಜನೆಗಳನ್ನು ಅರ್ಹರಿಗೆ ತಲುಪುವಂತೆ ನೋಡಿಕೊಳ್ಳಬೇಕು. ಎಸ್ ಸಿಪಿ ಟಿಎಸ್ ಪಿ ಹಾಸ್ಟೆಲ್ ಅಧಿಕಾರಿಗಳ ನಿರ್ಲಕ್ಷ್ಯ ವಹಿಸದೇ ನಿಗಾ ವಹಿಸಬೇಕು. ಮೆನು ಚಾರ್ಟ್ ಪ್ರಕಾರ ಆಹಾರ ವಿತರಣೆ, ಮಕ್ಕಳ ಭವಿಷ್ಯದ ದೃಷ್ಟಿಯಿಂದ ಸರ್ಕಾರ ಯೋಜನೆ ತಲುಪಲಿ, ವಸತಿ ನಿಲಯಗಳಲ್ಲಿ ಸಿಬ್ಬಂದಿ ಸರಿಯಾಗಿ ನಿಗಾ ವಹಿಸುವಂತೆ ನೋಡಿಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ಬೆಳಕು ಚೆಲ್ಲಬೇಕು ಎಂದರು.

ಪ್ರಕಾಶ ಗುಡಿಮನಿ ಮಾತನಾಡಿ, ತಾಪಂ ಸ್ಥಳೀಯ ಸಂಸ್ಥೆಗಳಿಗೆ ಅನುದಾನದ ಸದ್ಬಳಕೆಯಾಗಲಿ.

ಸಮುದಾಯ ಎದುರಿಸುವ ಕೆಲವು ಅನ್ಯಾಯ ತಡೆಗಟ್ಟಬೇಕು ಎಂದರು.

ಮಳಸಿದ್ದ ಲಕ್ಷ್ಮಣ ನಾಯ್ಕೋಡಿ ಮಾತನಾಡಿ, ನಕಲಿ ಜಾತಿ ಪ್ರಮಾಣ ಪತ್ರದ ಉಪಟಳಕ್ಕೆ ಬ್ರೇಕ್ ಹಾಕಬೇಕು ಎಂದರು.

ರಮೇಶ ಆಸಂಗಿ ಮಾತನಾಡಿ, ದೌರ್ಜನ್ಯ ಪ್ರಕರಣಗಳಲ್ಲಿ ನ್ಯಾಯ ದೊರಕಿಸಿ ಕೊಟ್ಟು ಜಿಲ್ಲಾಡಳಿತ ಸ್ಪಂದಿಸಿದೆ ಎಂದು ಎಸ್ ಪಿ ಹಾಗೂ ಡಿಸಿ ಅವರನ್ನು ಪ್ರಶಂಸಿದರು.

ಭೀಮರಾಯ ಜಿಗಜಿಣಗಿ ಮಾತನಾಡಿ, ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುವವರಿಗೆ ಪೌರ ಕಾರ್ಮಿಕರ ಪರಿಸ್ಥಿತಿ ಗಂಭೀರವಾಗಿದೆ. ಹಾಗಾಗಿ ಪೌರ ಕಾರ್ಮಿಕರಿಗೆ ಸಮರ್ಪಕ

ವೇತನ ಒದಗಿಸಿಕೊಡುವ ನಿಟ್ಟಿನಲ್ಲಿ ಆಯೋಗಕ್ಕೆ ಕೋರಿದರು.

ಶ್ರೀನಾಥ ಪೂಜಾರಿ ಮಾತನಾಡಿ, ಬಾಡಿಗೆ ವಸತಿ ನಿಲಯಗಳು ಅವ್ಯವಸ್ಥೆಯನ್ನು ಸರಿಪಡಿಸಿ ಅಲ್ಲಿ ಸಮರ್ಪಕ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಿದರು.

ನಾಗಪ್ಪ ವಡ್ಡರ ಮಾತನಾಡಿ, ಸರ್ಕಾರದ ಮಾರ್ಗಸೂಚಿಗಳನ್ವಯ ಜಾತಿ ಪ್ರಮಾಣ ಪತ್ರ ನೀಡಲಿಕ್ಕೆ ಆಯೋಗ ಗಂಭೀರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸುತ್ತಿದ್ದಂತೆಯೇ ಆಯೋಗದ ಅಧ್ಯಕ್ಷರಾದ ಮೂರ್ತಿ ಮಧ್ಯ ಪ್ರವೇಶಿಸಿ, ನಕಲಿ ಜಾತಿ ಪ್ರಮಾಣ ಪತ್ರದ ವಿರುದ್ಧ ಆಯೋಗ ನಿರ್ದಾಕ್ಷಣ್ಯ ಕ್ರಮ ತೆಗೆದುಕೊಳ್ಳುತ್ತಿದೆ ಎಂದರು.

ಸಿದ್ದು ರಾಯಣ್ಣವರ ಮಾತನಾಡಿ, ಸ್ಮಶಾನ ಜಾಗೆ ಕಬ್ಜಾ ಮಾಡಿಕೊಡುವ ಬಗ್ಗೆ ಗಮನಸೆಳೆದರು.

ಬಡವರಿಗೆ ಸೂರು ಒದಗಿಸಿಕೊಡುವ ಬಗ್ಗೆ, ದೇವಾನಂದ ಲಚ್ಯಾಣ ಮಾತನಾಡಿ, ಅಲೆಮಾರಿ ಸಮುದಾಯ ದೌರ್ಜನ್ಯ ಸಮಿತಿಗೆ ನಾಮನಿರ್ದೇಶನ ಸದಸ್ಯರಾಗಿ ನೇಮಕ ಮಾಡಿ, ಅಲೆ ಮಾರಿ ಜನರಿಗೆ ನಿವೇಶನ ಒದಗಿಸುವುದು. ಇಂಡಿಯಲ್ಲಿ ಈ ಸಮುದಾಯಕ್ಕೆ ಜಾಗ ಒದಗಿಸಿರುವ ಜಿಲ್ಲಾಧಿಕಾರಿಗಳ ಕಾರ್ಯವನ್ನು ಬಣ್ಣಿಸಿದರು. ಸರ್ಕಾರದ ಯೋಜನೆಗಳಿಗೆ ಅಲೆಮಾರಿ ಸಮುದಾಯಗಳಿಗೆ ತಲುಪವಂತೆ ಮನವಿ ಮಾಡಿದರು.

ಚೆನ್ನು ಕಟ್ಟಿಮನಿ, ಪರಸುರಾಮ ರೋಣಿಹಾಳ, ರಾಜಪಾಲ ಚವ್ಹಾಣ ಮಾತನಾಡಿದರು.

ಸಭೆಯಲ್ಲಿ ಆಯೋಗದ ಸದಸ್ಯರಾದ ಸುನೀಲ ಉಕ್ಕಲಿ, ಎನ್ ದಿವಾಕರ್ ಹಾಗೂ ಶ್ರೀಮತಿ ಗೀತಾ ಥಾವಂಶಿ, ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾದ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ, ಕಾರ್ಯದರ್ಶಿಗಳಾದ ಎಚ್. ಎಂ. ಶಿವರಾಂ, ಸಂಶೋಧನಾ ಅಧಿಕಾರಿ ಸಿಂದೂ ಎಚ್.ಎಸ್., ಬಿ.ಜೆ. ಇಂಡಿ ಸೇರಿದಂತೆ ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಮುಖಂಡರು ಉಪಸ್ಥಿತರಿದ್ದರು.

### ಸರ್ಕಾರದ ಗಮನ ಸೆಳೆದು ಸಮಸ್ಯೆಗಳ ಇತ್ಯರ್ಥಕ್ಕೆ ಕ್ರಮ

ಸಭೆಯಲ್ಲಿ ಪಜಾ, ಪಪಂ ಗೆ ಸಂಬಂಧಿಸಿದಂತೆ ಅನೇಕ ಸಮಸ್ಯೆಗಳನ್ನು ಆಯೋಗದ ಗಮನಕ್ಕೆ ತಂದಿದ್ದೀರಿ. ಗೋಮಾಳ ಜಮೀನು, ಅಸ್ಪೃಶ್ಯತೆ ನಿವಾರಣೆ, ಕಾರ್ಮಿಕರ ವೇತನ, ವಸತಿ ನಿಲಯಗಳ ನಿರ್ವಹಣೆ, ಮನೆ ನಿರ್ಮಾಣ, ಪೌರ ಕಾರ್ಮಿಕರ ಸರಿಯಾದ ವೇತನ ಪಾವತಿ ಸೇರಿದಂತೆ ಅನೇಕ ಅರ್ಜಿಗಳನ್ನು ಸ್ವೀಕರಿಸಿದ್ದು ಆಯೋಗ ಸ್ಪಂದಿಸಲಿದೆ ಎಂದು ಆಯೋಗದ ಅಧ್ಯಕ್ಷರಾದ ಡಾ.ಮೂರ್ತಿ ಭರವಸೆ ನೀಡಿದರು.

ಸರ್ಕಾರದ ಆದೇಶಗಳ ಪಾಲನೆ, ಎಸ್ ಸಿಪಿ- ಟಿ ಎಸ್ ಪಿ, ಅನುದಾನ ಬಳಕೆ, ಜೇಷ್ಠತೆ ನಿರ್ವಹಣೆ ಸೇರಿದಂತೆ ಎಲ್ಲ ವಿಷಯಗಳ ಬಗ್ಗೆ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ಅಧ್ಯಕ್ಷರು ಭರವಸೆ ನೀಡಿದರು.

ಅಲೆಮಾರಿ ಸಮುದಾಯ ದೌರ್ಜನ್ಯ ಸಮಿತಿಯಲ್ಲಿ ಪ್ರಾತಿನಿಧಿತ್ವ ಬಗ್ಗೆ ಗಂಭೀರವಾಗಿ ಪರಿಗಣಿಸಲಾಗುವುದು ಕಾನೂನಡಿ ಕ್ರಮಕೈಗೊಳ್ಳಲಾಗುವುದು. ಸ್ಮಶಾನ ಭೂಮಿ, ಕಂದಾಯ ಗ್ರಾಮ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಒಟ್ಟಾರೆ ಸಭೆಯಲ್ಲಿ ಆಲಿಸಲಾದ ಅಹವಾಲುಗಳನ್ನು ಆಯೋಗ ಸರ್ಕಾರದ ಗಮನ ಸೆಳೆಯಲಿದೆ ಎಂದು ಅಧ್ಯಕ್ಷರಾದ ಮೂರ್ತಿ ಭರವಸೆ ನೀಡಿದರು.

# ಉತ್ತಮ ಸಿದ್ಧತೆಯೇ ಯಶಸ್ಸಿನ ಮೂಲ




■ ಉದಾಹರಣೆಗೆ ದಿನಪತ್ರಿಕೆ

**ಜಯ್ ನುಡಿ (ವ್ಯಕ್ತಿತ್ವ ವಿಕಸನ ಕುರಿತು ಲೇಖನ ಮಾಲಿಕೆ)**

ಯಶಸ್ಸನ್ನು ಬಯಸದವರು ಯಾರೂ ಇಲ್ಲ.

ಎಲ್ಲರೂ ಅದರ ಹಿಂದೆ ಬೀಳುತ್ತಾರೆ. ಅದಕ್ಕೆಲ್ಲ ಏನೆಲ್ಲ ಮಾಡಲು ಸಿದ್ಧರಿರುತ್ತಾರೆ. ಆದರೆ ಯಶಸ್ಸು ಕೇವಲ ಕೆಲವರ ಜೀವನದಲ್ಲಿ ಹಾಸು ಹೊಕ್ಕಾದಂತೆ ಕಾಣಿಸುತ್ತದೆ. ಅವರು ಮುಟ್ಟಿದ್ದೆಲ್ಲ ಚಿನ್ನವಾಗುತ್ತದೆ. ಹಾಗಾಗಿ ಯಶಸ್ಸಿನ ರಹಸ್ಯವೇನು ಎಂಬುದು ಸಾವಿರಾರು ಜನರ ತಲೆಯನ್ನು ಕೊರೆಯುತ್ತಲೇ ಇರುತ್ತದೆ. ನಮ್ಮ ತಯಾರಿ ಅಂದರೆ ಸಿದ್ಧತೆಯು ನಮ್ಮ ಯಶಸ್ಸನ್ನು ಗಮನಾರ್ಹವಾಗಿ ರೂಪಿಸುತ್ತದೆ. ಅಂದರೆ ಯಶಸ್ವಿ ಜನರು ಶಿಸ್ತುಬದ್ಧ ಸಿದ್ಧತೆಯೊಂದಿಗೆ ಗೆಲುವಿನ ದಾರಿಯನ್ನು ಕಂಡುಕೊಂಡಿರುತ್ತಾರೆ. ಮತ್ತು ಅದೇ ಹಾದಿಯಲ್ಲಿ ಮುಂದುವರೆಯುತ್ತಾರೆ. ಹೀಗಾಗಿ ಅವರು ಮುಖ್ಯವಾಹಿನಿಯಲ್ಲಿ ಮಿಂಚುತ್ತಿರುತ್ತಾರೆ.

**ಸಿದ್ಧತೆ ಬೇಕು**

'ಅವಕಾಶಗಳು ಬರುವುದು ಅದೃಷ್ಟದಿಂದಲ್ಲ. ಸಿದ್ಧತೆ ಮತ್ತು ಅವಕಾಶಗಳು ಭೇಟಿಯಾದಾಗ ಯಶಸ್ಸು ಸಿಗುತ್ತದೆ.' ಎಂಬ ಸಾರ್ವಕಾಲಿಕ ಸತ್ಯ ಜೀವನದಲ್ಲಿ ವೃತ್ತಿಯಲ್ಲಿ ಅಥವಾ ಓದಿನಲ್ಲಿ ಯಶಸ್ಸು ಕಾಣಲು ಕೇವಲ ಪ್ರತಿಭೆ ಸಾಲದು; ಅದಕ್ಕೆ ಸರಿಯಾದ ಸಿದ್ಧತೆ ಬೇಕೇಬೇಕು. ಸಿದ್ಧತೆಯಿಲ್ಲದೆ ಯಶಸ್ಸು ಕೇವಲ ಕಾಕತಾಳೀಯ. ಆದರೆ ಸಿದ್ಧತೆಯೊಂದಿಗಿನ ಸಾಧನೆ ಸ್ಥಿರವಾಗಿರುತ್ತದೆ.

**ಸಿದ್ಧತೆ ಎಂದರೇನು?**

ಸಿದ್ಧತೆ ಎಂದರೆ ಒಂದು ನಿರ್ದಿಷ್ಟ ಗುರಿಯನ್ನು ತಲುಪಲು ಅಗತ್ಯವಾದ ಜ್ಞಾನ, ಕೌಶಲ್ಯ ಸಂಪನ್ಮೂಲಗಳನ್ನು ಮೊದಲೇ ಯೋಜಿಸಿ ತಯಾರಿ ಮಾಡಿಕೊಳ್ಳುವುದು. ಇದು ಕೇವಲ ಓದುವುದಲ್ಲ, ಬೌದ್ಧಿಕವಾಗಿ ಮತ್ತು ದೈಹಿಕವಾಗಿ ಸವಾಲುಗಳನ್ನು ಎದುರಿಸಲು ಸಿದ್ಧರಾಗುವುದಾಗಿದೆ. ದೈಹಿಕ ಮತ್ತು ಮಾನಸಿಕ ಆರೋಗ್ಯ ಉತ್ತಮವಾಗಿದ್ದರೆ ಮಾತ್ರ ಸಿದ್ಧತೆಗೆ ಅಗತ್ಯವಾದ ಶಕ್ತಿ ನೀಡುತ್ತದೆ. ಸಿದ್ಧತೆಯು ಯಶಸ್ಸಿನ ಮೇಲೆ ಅತ್ಯಧಿಕ ಪ್ರಭಾವ ಬೀರಬಲ್ಲದು.

**ಆತ್ಮವಿಶ್ವಾಸ**

ಯಶಸ್ಸಿನ ಮೂಲ ಆತ್ಮವಿಶ್ವಾಸದಲ್ಲಿದೆ. ಬಹುಬೇಗ ಯಶಸ್ಸು ಪಡೆಯಬೇಕೆಂದು ಬಹುಕಾರ್ಯಗಳಲ್ಲಿ ತೊಡಗಿಕೊಳ್ಳುತ್ತೇವೆ. ಇದರಿಂದ ವಿಫಲರಾಗುತ್ತೇವೆ. ಇದು ನಮ್ಮ ಆತ್ಮವಿಶ್ವಾಸವನ್ನು ಕುಗ್ಗಿಸುತ್ತದೆ. ಬಹುಕಾರ್ಯಗಳನ್ನು ಒಂದೇ ಸಮಯದಲ್ಲಿ ಮಾಡುವುದರಿಂದ ಯಶಸ್ಸನ್ನು ನಮ್ಮದಾಗಿಸಿಕೊಳ್ಳಬೇಕೆಂದು ಹವಣಿಸುವುದು ತಪ್ಪು. ಯಶಸ್ವಿ ವ್ಯಕ್ತಿಗಳು ಒಂದೇ ವಿಷಯದ ಮೇಲೆ ಕೇಂದ್ರೀಕರಿಸುತ್ತಾರೆ. ಅದಕ್ಕಾಗಿ ತಮ್ಮ ಶಕ್ತಿ ಹಾಗೂ ಅನ್ವೇಷಣೆಗಳನ್ನೆಲ್ಲಾ ವಿನಿಯೋಗಿಸುತ್ತಾರೆ. ಅದ್ಭುತವೆನಿಸುವ ಗಮನದ ಅಭ್ಯಾಸವು ಅಚ್ಚರಿ ತರುವ ಫಲಿತಾಂಶವನ್ನು ನೀಡುತ್ತದೆ. ಇದರಿಂದ ಆತ್ಮವಿಶ್ವಾಸ ತನ್ನಿಂದತಾನೇ ಮೇಲೇರುತ್ತದೆ. ಆತ್ಮವಿಶ್ವಾಸ ದಕ್ಷತೆಯನ್ನು ಹೆಚ್ಚಿಸುತ್ತದೆ. ಗುರಿಯೆಡಗಿನ ವೇಗವನ್ನು ದ್ವಿಗುಣಗೊಳಿಸುತ್ತದೆ.


**ತಪ್ಪುಗಳಿಂದ ಕಲಿಯಿರಿ**

ಥಾಮಸ್ ಅಲ್ವಾ ಎಡಿಸನ್ ಲೈಟ್ ಬಲ್ಬ್ ಆವಿಷ್ಕರಿಸುವ ಮೊದಲು ಸಾವಿರಾರು ಬಾರಿ ವಿಫಲರಾದರು ಆದರೆ ಅವರು ಅದನ್ನು, ಸೋಲು ಎಂದು ಕರೆಯಲಿಲ; ಬದಲಿಗೆ 'ಬಲ್ಬ್ ಕಂಡು ಹಿಡಿಯಲು ಕೆಲಸ ಮಾಡದ 10000 ಮಾರ್ಗಗಳನ್ನು ಕಂಡುಹಿಡಿದಿದ್ದೇನೆ' ಎಂದು ಸಿದ್ಧತೆಯನ್ನು ಮುಂದುವರೆಸಿದರು. ವಿಫಲತೆಯನ್ನೇ ಸವಾಲಾಗಿ ಸ್ವೀಕರಿಸಿದರು. ನನ್ನಿಂದ ಏಕೆ ಸಾಧ್ಯವಿಲ್ಲವೆಂಬುದನ್ನು ಪ್ರಶ್ನೆಯಾಗಿ ತಮಗೆ ತಾವು ಹಾಕಿಕೊಂಡರು. ವಿಫಲತೆಯನ್ನು ಗೆಲುವಿನ ಮೆಟ್ಟಿಲಾಗಿಸಿಕೊಂಡರು. ಅಷ್ಟೇ ಅಲ್ಲ ಸೋಲಿನಲ್ಲೇ ಗೆಲುವು ಸಾಧಿಸುವ ಛಲವನ್ನು ಹುಟ್ಟಿಸಿಕೊಂಡರು. ವೈಫಲ್ಯವು ಯಶಸ್ಸಿನತ್ತ ಪಯಣದ ಒಂದು ಭಾಗವಾಗಿದೆ ಎಂದು ಮನಗಂಡರು. ಕೊನೆಗೆ ತಮ್ಮ ಆವಿಷ್ಕಾರದಲ್ಲಿ ಯಶಸ್ವಿಯಾದರು. ತಯಾರಿ ಸರಿಯಾಗಿದಾಗ, ಭಯ ಕಡಿಮೆಯಾಗುತ್ತದೆ. ಯಾವುದೇ ಕೆಲಸದಲ್ಲಿ ಭಯ ಕಾಡಿದರೆ ಅದರಲ್ಲಿ ಗೆಲುವು ಸಾಧಿಸುವುದು ತುಂಬಾ ಕಷ್ಟವಾಗುತ್ತದೆ. ಸೋಲನ್ನು ಅಂತಿಮ ಎಂದು ಭಾವಿಸದೆ, ಅದರಿಂದ ಪಾಠ ಕಲಿತು ಸನ್ನದ್ಧರಾಗಿ.



**ಸಮಯದ ಸದುಪಯೋಗ**

ಸಮಯವೆಂಬುದು ಒಮ್ಮೆ ಬಳಸಿದರೆ ಕಳೆದುಹೋಗುವ ನಿಧಿ. ಯಾವುದೇ ಸಿರಿವಂತಿಕೆಯನ್ನು ಕೊಟ್ಟರೂ ಎಂದೂ ಹಿಂದೆ ಬಾರದ ಸಂಪತ್ತು. ಹೀಗಾಗಿ ಸಿದ್ಧತೆಯಲ್ಲಿ ಸಮಯವನ್ನು ಸರಿಯಾಗಿ ಉಪಯೋಗಿಸಿಕೊಳ್ಳಬೇಕು. ಮುಂಜಾನೆ ಬೇಗ ಎದ್ದು ಯಶಸ್ಸಿನ ಕಡೆಗೆ ಓಡಲು ಉತ್ತಮ ಸಿದ್ಧತೆ ನಡೆಸುವುದು ಯಶಸ್ಸನ್ನು ನಿಮ್ಮ ಮನೆ ಬಾಗಿಲಿಗೆ ತಂದು ನಿಲ್ಲಿಸುವುದು. ವಿಶ್ವದ ಶ್ರೇಷ್ಠ ಬಾಸ್ಕೆಟ್ ಬಾಲ್ ಆಟಗಾರ ಮೈಕೆಲ್ ಜೋರ್ಡಾನ್ ಪಂದ್ಯಗಳಿಗಿಂತ ಹೆಚ್ಚು ಸಮಯ ಅಭ್ಯಾಸಕ್ಕೆ (ಸಿದ್ಧತೆಗೆ) ಮೀಸಲಿಡುತ್ತಿದ್ದರು. 'ನಾನು ನನ್ನ ವೃತ್ತಿಜೀವನದಲ್ಲಿ 9000ಕ್ಕೂ ಹೆಚ್ಚು ಶಾಟ್‌ಗಳನ್ನು ತಪ್ಪಿಸಿದ್ದೇನೆ. ಸುಮಾರು 300 ಪಂದ್ಯಗಳನ್ನು ಸೋತಿದ್ದೇನೆ. ಹೀಗೆ ಪದೇ ಪದೇ ವಿಫಲವಾಗಿದ್ದರಿಂದಲೇ ನಾನು ಯಶಸ್ವಿಯಾದೆ.' ಎನ್ನುತ್ತಾರೆ. ಮುಂಚಿತವಾದ ಯೋಜನೆಯು ಬಿಕ್ಕಟ್ಟಿನ ಸಮಯದಲ್ಲಿ ವಿಚಲಿತರಾಗದೆ, ದೃಢವಾಗಿ ನಿಲ್ಲುವ ಶಕ್ತಿಯನ್ನು ನೀಡುತ್ತದೆ. ದೈನಂದಿನ ಯೋಜನೆ ಅಥವಾ ಮಾಡಬೇಕಾದ ಕೆಲಸಗಳ ಪಟ್ಟಿ ಮೊದಲೇ




ಮಾಡಿಟ್ಟುಕೊಳ್ಳಿ. ಯಶಸ್ವಿ ಜನರು ತಮಗಾಗಿ ಸಮಯ ಮೀಸಲಿರುಸುತ್ತಾರೆ. ಆ ಸಮಯದಲ್ಲಿ ಮುಂದಿನ ಯೋಜನೆಗಳ ಬಗೆಗೆ ಯೋಚಿಸಿ ಯೋಜಿಸುತ್ತಾರೆ.

**ಪರಿಹಾರ**

ಎಲೋನ್ ಮಸ್ಕ್ ಯಾವುದೇ ಹೊಸ ಪ್ರಾಜೆಕ್ಟ್ ಕೈಗೆತ್ತಿಕೊಳ್ಳುವ ಮೊದಲು, ಆ ವಿಷಯದ ಬಗ್ಗೆ ಆಳವಾದ ಸಂಶೋಧನೆ ಮತ್ತು ಸಿದ್ಧತೆ ಮಾಡುತ್ತಾರೆ. ಅವರು ಒಂದೇ ವಿಷಯದ ಮೇಲೆ ಗುರಿ ಇಟ್ಟು, ಅದಕ್ಕಾಗಿ ಶಕ್ತಿಯನ್ನೆಲ್ಲಾ ವಿನಿಯೋಗಿಸುತ್ತಾರೆ. ಉತ್ತಮ ಸಿದ್ಧತೆಯು ಬಿಕ್ಕಟ್ಟಿನ ಸಮಯದಲ್ಲಿ ವಿಚಲಿತರಾಗದೆ ದೃಢವಾಗಿ ನಿಲ್ಲುವ ಶಕ್ತಿಯನ್ನು ನೀಡುತ್ತದೆ. ಅನಿರೀಕ್ಷಿತ ಸವಾಲುಗಳಿಗೆ ಪರಿಹಾರ ನೀಡುತ್ತದೆ.

**ಸ್ಪಷ್ಟ ಗುರಿ**

ಯಾವುದು ಗೊತ್ತುಗುರಿಯಿಲ್ಲದೆ ಏನನ್ನೂ ಸಾಧಿಸಲಾಗದು. ನೀವು ಸಾಧಿಸಲು ಬಯಸುವ ಗುರಿಗಳ ಬಗ್ಗೆ ಸ್ಪಷ್ಟತೆ ಇರಲಿ. ಸ್ಪಷ್ಟ ಗುರಿಯು ಗೊಂದಲವನ್ನು ನಿವಾರಿಸುವುದು. ಮತ್ತು ಅನಾವಶ್ಯಕವಾಗಿ ಅತ್ತಿತ್ತ ಮನಸ್ಸು ಹೊಯ್ದಾಡುವುದನ್ನು ನಿಲ್ಲಿಸುತ್ತದೆ. ಯಶಸ್ಸೆಂಬುದು ಮ್ಯಾರಥಾನ್‌ನಂತೆ ಅಲ್ಲ. ಅದಕ್ಕೆ ಗುರಿ ಇರುವುದು ಮುಖ್ಯ. ಗುರಿ ಉದ್ದೇಶ ಸ್ಪಷ್ಟತೆಯನ್ನು ಬಲಪಡಿಸುವ ಅಭ್ಯಾಸಗಳನ್ನು ರೂಢಿಸಿಕೊಳ್ಳಬೇಕು. ದಿನವನ್ನು ನಿರ್ದಿಷ್ಟ ಉದ್ದೇಶದೊಂದಿಗೆ ಆರಂಭಿಸಬೇಕು. ಸುತ್ತಲೂ ಏನು ನಡೆಯುತ್ತಿದೆ ಎಂಬುದನ್ನು ನೋಡಲು ಸಾಮಾಜಿಕ ಮಾಧ್ಯಮಗಳ ಪುಟಗಳನ್ನು ಸ್ಕ್ರೋಲ್ ಮಾಡುವುದನ್ನು ಬಿಡಬೇಕು. ದೊಡ್ಡ ಗುರಿಯನ್ನು ಸಣ್ಣ ಸಣ್ಣ ಕೆಲಸಗಳನ್ನಾಗಿ ವಿಭಜಿಸಿ . ಅವುಗಳನ್ನು ಮಾಡಿ ಮುಗಿಸಲು ಮುಂದಾಗಿ.

**ನಿರಂತರ ಕಲಿಕೆ**

ಹೊಸ ವಿಷಯಗಳನ್ನು ಕಲಿಯಲು ಪುಸ್ತಕಗಳನ್ನು ಓದಿ. ಆನ್‌ಲೈನ್ ಕೋರ್ಸ್‌ಗಳನ್ನು ತೆಗೆದುಕೊಳ್ಳಿ. ಅವಿರತ ಪರಿಶ್ರಮ ಏಕಾಗ್ರತೆ ಇರುವುದು ಅತ್ಯವಶ್ಯಕವಾಗಿದೆ. ವಿಶ್ವದ ಅತ್ಯಂತ ಶ್ರೀಮಂತ ಬಿಲಿಯನೇರ್ ಹಾಗೂ ಅಮೇಜಾನ್‌ನಂತಹ ಸಂಸ್ಥೆಯನ್ನು ನಿರ್ಮಿಸುವಲ್ಲಿ ಜೆಫ್ ಬೆಜೋನ್ ಪಟ್ಟ ಶ್ರಮ ಅಷ್ಟಿಷ್ಟಲ್ಲ. ಸಿದ್ಧತೆಗೆ ಮಾನಸಿಕ ತಿಳುವಳಿಕೆ ಮತ್ತು ಮನೋಸ್ಥೈರ್ಯ ಬೇಕು. ಮಾನಸಿಕ ಸಾಮರ್ಥ್ಯಗಳನ್ನು ನಿರಂತರವಾಗಿ ಬೆಳೆಸಿಕೊಳ್ಳಬೇಕು. ಇದರಿಂದ ಆಂತರಿಕ ಶಕ್ತಿ ಹೆಚ್ಚಾಗಿ ಗೆಲುವಿಗೆ ದಾರಿ ಮಾಡಿಕೊಡುತ್ತದೆ. ಯಶಸ್ಸು ಎಂಬುದು ಅಷ್ಟು ಸುಲಭವಾಗಿ ಸಿಗುವಂತದ್ದಲ್ಲ, ಅದನ್ನು ಪಡೆಯಲು ನಿರಂತರ ಕಲಿಕೆ ಮೂಲಕ ಹಾದು ಹೋಗಬೇಕಾಗುತ್ತದೆ. ಆ್ಯಪಲ್ ಕಂಪನಿಯ ಸಹ-ಸಂಸ್ಥಾಪಕ ಸ್ಟಿವ್ ಜಾಬ್ಸ್ ತಮ್ಮ ಪ್ರಸ್ತುತಿಗಳಿಗೆ (ಪ್ರಸೆಂಟೇಶನ್) ವಾರಗಳ ಮುಂಚಿತವಾಗಿ ಸಿದ್ಧತೆ ನಡೆಸುತ್ತಿದ್ದರು. ಪ್ರತಿಯೊಂದು ಸಣ್ಣ ಅಂಶವನ್ನು ಅವರು ಪರಿಶೀಲಿಸುತ್ತಿದ್ದರು. ಇದರಿಂದ ಅವರ ಉತ್ಪನ್ನ ಬಿಡುಗಡೆಗಳು ಅದ್ಭುತ ಯಶಸ್ಸು ಕಾಣುತ್ತಿದ್ದವು.

**ಮೂಲಮಂತ್ರ**

ಕೆಲವರಿಗೆ ಸಿದ್ಧತೆಯ ಬಲದಿಂದ ಯಶಸ್ಸು ಒಲಿದರೆ, ಇನ್ನೂ ಕೆಲವರಿಗೆ ಸಿದ್ಧತೆಯ ಅಭಾವದಿಂದ ಜೀವನಪರ್ಯಂತ ಕಷ್ಟಪಟ್ಟರೂ ಸಹ ಯಶಸ್ಸೆಂಬುದು



ನನಸಾಗದ ಕನಸಾಗಿಯೇ ಉಳಿದು ಬಿಡುತ್ತದೆ. ಯಶಸ್ಸಿನ ಮೂಲಮಂತ್ರ ಸಿದ್ಧತೆ ಎಂಬುದು ಸರ್ವವಿಧಿತ. ಯಶಸ್ಸು ಎಂಬುದು ಒಂದು ರಾತ್ರಿಯಲ್ಲಿ ಸಿಗುವ ಫಲಿತಾಂಶವಲ್ಲ. ಅದು ದೀರ್ಘಕಾಲದ ಸಿದ್ಧತೆ, ಶ್ರಮ ಮತ್ತು ಶಿಸ್ತಿನ ಪ್ರತಿಫಲ. 'ಉತ್ತಮ ಸಿದ್ಧತೆಯೇ ಯಶಸ್ಸಿನ ಮೂಲ.' ಎಂಬುದನ್ನು ನೆನಪಿಡಿ. ಇಂದೇ ಸಿದ್ಧತೆಯನ್ನು ಆರಂಭಿಸಿ ನಿಮ್ಮ ಯೋಚನೆಗಳನ್ನು ಯೋಜನೆಗಳನ್ನು ಗೆಲುವಾಗಿ ಪರಿವರ್ತಿಸಲು ಪ್ರಯತ್ನಿಸಿ. ಆಗ ಯಶಸ್ಸು ತಾನೇ ನಿಮ್ಮನ್ನು ಹಿಂಬಾಲಿಸುತ್ತದೆ.






ಲೇಖಕ.
■ ಜಯಶ್ರೀ.ಜೆ. ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142

# ಮೇ.1 ರಂದು ಸಚಿವ ಎಂ.ಬಿ.ಪಾಟೀಲರಿಂದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ಮೇ 1 ರಿಂದ ಮೇ 3 ರವರೆಗೆ ಜಿಲ್ಲೆಯಲ್ಲಿ ಅಭಿವೃದ್ಧಿ ಕಾಮಗಾ–ರಿಗಳಿಗೆ ಚಾಲನೆ ನೀಡಲಿದ್ದಾರೆ.

ಮೇ 1 ಶುಕ್ರವಾರರಂದು ಬೆ.10ಗಂ. ಬರಟಗಿ ಗ್ರಾಮದಲ್ಲಿ ಸಣ್ಣ ನೀರಾವರಿ ಇಲಾಖೆಯಡಿ ರೂ.734 ಲಕ್ಷ ವೆಚ್ಚದಲ್ಲಿ ಅರಕೇರಿ, ಬರಟಗಿ ಮತ್ತು ಹಂಚಿನಾಳ ಪಿ.ಎಚ್ ಹಾಗೂ ಬೆ.11ಗಂ. ಲೋಹಗಾಂವ ಗ್ರಾಮದಲ್ಲಿ ಸಣ್ಣ ನೀರಾವರಿ ಇಲಾಖೆ ರೂ.978 ಲಕ್ಷ ವೆಚ್ಚದಲ್ಲಿ ಲೋಹಗಾಂವ, ಟಕ್ಕಳಕಿ, ಹುಬನೂರ, ಜಾಲಗೇರಿ, ಇಟ್ಟಂಗಿಹಾಳ, ಸಿದ್ಧಾಪೂರ ಗ್ರಾಮಗಳಲ್ಲಿ ಸರಣಿ ಬಾಂದಾರ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಿ, ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಈ ಕಾರ್ಯಕ್ರಮಗಳಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಲಿರುವ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಅವರು ಈ ಬಾಂದಾರ ನಿರ್ಮಾಣ ಕಾಮ ಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ನಂತರ ಸಾ.5ಗಂ ತಿಗಣಿಬಿದರಿ ಗ್ರಾಮದಲ್ಲಿ ಸಣ್ಣ ನೀರಾವರಿ ಇಲಾಖೆ ರೂ.984 ಲಕ್ಷ ವೆಚ್ಚದಲ್ಲಿ ಕಾಖಂಡಕಿ, ಬಬಲೇಶ್ವರ ಮಮದಾಪೂರ ಬಬಲೇಶ್ವರ, ಯಕ್ಕುಂಡಿ, ತಿಗಣಿಬಿದರಿ ತಾಜಪೂರ. ಎಚ್ ಸರಣಿ ಬಾಂದಾರ ನಿರ್ಮಾಣ ಕಾಮಗಾ–ರಿಗಳಿಗೆ ಚಾಲನೆ ನೀಡಲಿದ್ದಾರೆ. ಮೇ 2 ಶನಿವಾರ ಬೆ.10ಗಂ. ದೇವರಹಿಪ್ಪರಗಿ ವಿಧಾನಸಭಾ ಕ್ಷೇತ್ರದಲ್ಲಿ ನೂತನವಾಗಿ ನಿರ್ಮಿಸಿರುವ ಪಟ್ಟಣ ಪಂಚಾಯತ ಕಟ್ಟಡ, ಪೊಲೀಸ್ ಸ್ಟೇಶನ್ ಕಟ್ಟಡ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಕಟ್ಟಡ ಉದ್ಘಾಟಿಸಿ, ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಮ.2ಗಂ. ತಾಳಿಕೋಟಿ ರಸ್ತೆಯಲ್ಲಿರುವ ಹುಂಡೇಕಾರ ಹಾಲ್ನಲ್ಲಿ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಮೇ 3 ರವಿವಾರ ಬೆ.10.ಗಂ ಯಕ್ಕುಂಡಿ ಗ್ರಾಮದಲ್ಲಿ ಪಿ.ಡಬ್ಲ್ಯೂ.ಡಿ ರೂ.300 ಲಕ್ಷ ವೆಚ್ಚದಲ್ಲಿ ವಿಜಯಪುರ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ–34 ಕಿ.ಮೀ.0.00 ರಿಂದ 3.00 ವರೆಗೆ ಯಕ್ಕುಂಡಿ –ಸಂಗಾಪೂರ.ಎಚ್.ಎಚ್ – ಶೇಗುಣಸಿ–ಕಾಖಂಡಕಿ ವ್ಹಾಯಾ ಹರಳಯ್ಯನ ಗುಂಡವರೆಗೆ ರಸ್ತೆ ಸುಧಾರಣೆ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಲಿದ್ದಾರೆ. ಸಂ.5ಗಂ. ದೇವರಗೆಣ್ಣೂರ ಗ್ರಾಮದಲ್ಲಿ ಪಿ.ಡಬ್ಲ್ಯೂ.ಡಿ ಇಲಾಖೆಯಡಿ ರೂ.400 ಲಕ್ಷ ವೆಚ್ಚದಲ್ಲಿ ಕಂಬಾಗಿ–ದೇವರಗೆಣ್ಣೂರ ಗ್ರಾಮದವರೆಗೆ ಕಿ.ಮೀ4.00 ರಿಂದ 8.00ರ ವರೆಗೆ ರಸ್ತೆ ಸುಧಾರಣೆ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಲಿದ್ದಾರೆ. ನಂತರ ಸಂ.6ಗಂ. ಮದಗುಣಕಿ ಗ್ರಾಮದ ಶಿವಣ್ಣವರ ವಸ್ತಿಯಿಂದ ಕೊಡಬಾಗಿ ರಸ್ತೆ ವರೆಗೆ ಪಿ.ಡಬ್ಲ್ಯೂ.ಡಿ ಇಲಾಖೆಯಡಿ ರೂ.150 ಲಕ್ಷ ವೆಚ್ಚದಲ್ಲಿ 3ಕಿ.ಮೀ ರಸ್ತೆ ಸುಧಾರಣೆ, ಪ್ರಾಥ–ಮಿಕ ಶಾಲಾ ಕಟ್ಟಡ ಉದ್ಘಾಟನೆ ಹಾಗೂ ಸಿ.ಸಿ ರಸ್ತೆ ಕಾಮಗಾರಿ ಭೂಮಿಪೂಜೆ ನೆರವೇರಿಸಿ, ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಸಚಿವರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

# ಅಕ್ಷತಾಗೆ ರಾಜ್ಯಪಾಲರಿಂದ ಚಿನ್ನದ ಪದಕ ಪ್ರದಾನ

■ ಉದಯರಶ್ಮಿ ದಿನಪತ್ರಿಕೆ




ಬಾಗಲಕೋಟೆ: ಕರ್ನಾಟಕ ವಿಶ್ವವಿದ್ಯಾಲಯದ 75ನೇ ಘಟಿಕೋತ್ಸವ ಸಮಾರಂಭವು ಗದಗ ನಗರದ ಗಾಂಧಿ ಭವನದಲ್ಲಿ ಭವ್ಯವಾಗಿ ನಡೆಯಿತು.

ಈ ಸಂದರ್ಭದಲ್ಲಿ ನಗರದ ಕುಮಾರಿ ಅಕ್ಷತಾ ಶಾಂತಕುಮಾರ ಭಜಂತ್ರಿ ಅವರು ಎಂ.ಎಡ್ (ಶಿಕ್ಷಣ) ಸ್ನಾತಕೋತ್ತರ ಪದವಿಯಲ್ಲಿ ಉನ್ನತ ಸ್ಥಾನ ಗಳಿಸಿದ ಸಾಧನೆಗೆ "ಚಿನ್ನದ ಪದಕ" ಪಡೆದು ವಿಶೇಷ ಗೌರವಕ್ಕೆ ಪಾತ್ರರಾದರು.

ಸದ್ಯ ಕರ್ನಾಟಕ ವಿಶ್ವವಿದ್ಯಾಲಯದಲ್ಲಿಯೇ ಪಿ.ಹೆಚ್.ಡಿ ಅಧ್ಯಯನ ಮಾಡುತ್ತಿರುವ ಅಕ್ಷತಾ ಅವರು ತಮ್ಮ ಶೈಕ್ಷಣಿಕ ಸಾಧನೆಯ ಮೂಲಕ ಗಮನಸೆಳೆದಿದ್ದಾರೆ. ಸಮಾರಂಭದಲ್ಲಿ ಕರ್ನಾಟಕ ಸರ್ಕಾರದ ಘನವೆತ್ತ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಥಾವರಚಂದ್ ಗೆಹ್ಲೋಟ್ ಅವರು ಪದಕವನ್ನು ಪ್ರದಾನಿಸಿದರು.

ಈ ವೇಳೆ ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾಲಯದ ಸಮಕುಲಾಧಿಪತಿಗಳಾದ ಡಾ. ಎಂ.ಸಿ. ಸುಧಾಕರ್, ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎ.ಎಂ. ಖಾನ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತ–ರಿದ್ದರು. ವಿದ್ಯಾರ್ಥಿನಿ ಅಕ್ಷತಾ ಭಜಂತ್ರಿಯ ಈ ಸಾಧನೆಗೆ ಕುಟುಂಬಸ್ಥರು, ಶಿಕ್ಷಕರು ಹಾಗೂ ಸ್ನೇಹಿತರಿಂದ ಹರ್ಷ ವ್ಯಕ್ತವಾಗಿದೆ.

ಅಕ್ಷತಾ ಅವರ ಈ ಸಾಧನೆ ಶಿಕ್ಷಣ ಕ್ಷೇತ್ರದಲ್ಲಿ ಇನ್ನಷ್ಟು ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ ಎಂದು ಗಣ್ಯರು ಅಭಿಪ್ರಾಯಪಟ್ಟರು.

# ಬಾಗಲಕೋಟೆಯಲ್ಲಿ ಮತ ಎಣಿಕೆ ಸಿಬ್ಬಂದಿಗೆ ತರಬೇತಿ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ: ಬಾಗಲಕೋಟೆ ವಿಧಾನಸಭಾ ಈ ಉಪ ಚುನಾವಣೆಯ ಮತ ಎಣಿಕೆ ಕಾರ್ಯ ಮೇ 4ರಂದು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಡೆಯಲಿದ್ದು, ಹಿನ್ನಲೆಯಲ್ಲಿ ಮತ ಎಣಿಕೆ ಸಿಬ್ಬಂದಿಗೆ ತರಬೇತಿ ಕಾರ್ಯಕ್ರಮ ಜರುಗಿತು. ಜಿಲ್ಲಾಧಿಕಾ–ರಿಗಳ ಸಭಾಂಗಣದಲ್ಲಿ ಹಮ್ಮಿಕೊಂಡ ತರಬೇತಿಯನ್ನು ಉದ್ದೇಶಿಸಿ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಮತ ಎಣಿಕೆ ಕಾರ್ಯಕ್ಕೆ ನೇಮಕಗೊಂಡ ಅಧಿಕಾರಿ ಹಾಗೂ ಸಿಬ್ಬಂದಿ ತಮ್ಮ ಕಾರ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು. ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಮತ ಎಣಿಕೆ ಕಾರ್ಯ ನಡೆಸಲಾಗುತ್ತಿದೆ. ಈಗಾಗಲೇ ಮತ ಎಣಿಕೆ ಕೇಂದ್ರ ಸಂಪೂರ್ಣ ಸಜ್ಜಾಗಿದ್ದು, ಚುನಾವಣಾ ಆಯೋಗದ ನಿರ್ದೇಶನಗಳನ್ವಯ ಕಾರ್ಯವನ್ನು ಯಶಸ್ವಿಯಾಗಿ ನಡೆಸಲು ತಿಳಿಸಿದರು. ಎಣಿಕೆ

ಮತ ಎಣಿಕೆಗೆ ಒಟ್ಟು 14 ಟೇಬಲ್‌ಗಳನ್ನು ಇರಿಸಲಾಗಿದ್ದು, ಪ್ರತಿ ಟೇಬಲ್‌ಗೆ ತಲಾ ಒಬ್ಬರಂತೆ ಮತ ಎಣಿಕಾ ಮೇಲ್ವಿಚಾರಕ, ಸಹಾಯಕ ಮತ್ತು ಮೈಕ್ರೋ ವೀಕ್ಷಕರು ಸೇರಿದಂತೆ ಒಟ್ಟು 62 ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದಾರೆ. ಅಂಚೆ ಮತಪತ್ರ ಎಣಿಕೆಗೆ ಪ್ರತ್ಯೇಕ ಕೊಠಡಿ ಇದ್ದು, 2 ಟೇಬಲ್ ಇರಿಸಲಾಗಿದೆ. ಸ್ಕ್ಯಾನಿಂಗ್ ಮಾಡಲು ಟೇಬಲ್ ಸಹ ಇರಿಸಲಾಗಿದೆ ಎಂದು ತಿಳಿಸಿದರು.

ಮಾಸ್ಟರ ಟ್ರೈನರ್ ಶಶಿಶೇಖರ ರೆಡ್ಡಿ ಅವರು ಪ್ರಾತ್ಯಕ್ಷಿಕೆಯ ಮೂಲಕ ಮತ ಎಣಿಕೆ ಕುರಿತು ಸಂಪೂರ್ಣ ಮಾಹಿತಿಯನ್ನು ತಿಳಿಸಿಕೊಟ್ಟರು. ಮತ ಎಣಿಕೆ ಪ್ರಕ್ರಿಯೆಯ ಎಲ್ಲ ಹಂತಗಳ ಕುರಿತು ವಿವರವಾದ ಮಾಹಿತಿ ನೀಡಿದರು. ವಿವಿಎಂ ಯಂತ್ರಗಳ ಬಳಕೆ, ವಿವಿಪ್ಯಾಟ್ ಸ್ಲಿಪ್‌ಗಳ ಪರಿಶೀಲನೆ, ಮತ ಎಣಿಕೆ ವೇಳೆ ಅನುಸರಿಸಬೇಕಾದ ನಿಯಮಗಳು ಹಾಗೂ ಎಚ್ಚರಿಕೆ ಕ್ರಮಗಳ ಕುರಿತು ಪ್ರಾಯೋಗಿಕ ತರಬೇತಿ ನೀಡಿದರು.

ತರಬೇತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರರಾದ ವಾಸುದೇವ ಸ್ವಾಮಿ, ಡಾ. ಪ್ರದೀಪಕುಮಾರ ಸೇರಿದಂತೆ ಮತ ಎಣಿಕೆ ಮೇಲ್ವಿಚಾರಕರು, ಸಹಾಯಕರು ಹಾಗೂ ಮೈಕ್ರೋ ಆಬ್ಸರವರ್ ಪಾಲ್ಗೊಂಡಿದ್ದರು.




# ಮತದಾನ ನಮ್ಮೆಲ್ಲರ ಹಕ್ಕು :ಡಾ.ಶಿವಾನಂದ ಜಮಾದಾರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ. ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯ ಹಾಗೂ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ, ರಾಷ್ಟ್ರೀಯ ಸೇವಾ ಯೋಜನೆ ಘಟಕ 1 ಮತ್ತು 2 ರ ಸಹಯೋಗದಲ್ಲಿ ಏ.25 ರಂದು ದತ್ತು ಗ್ರಾಮ ಅರಕೇರಿ ಸರ್ಕಾರಿ ಪ್ರೌಢಶಾಲೆಯಲ್ಲಿ ಎನ್ ಎಸ್ ಎಸ್ ವಾರ್ಷಿಕ ವಿಶೇಷ ಶಿಬಿರದಲ್ಲಿ ಮನೆ ಮನೆಗೆ, ಮನ ಮನಕೆ ಬಾಬಾಸಾಹೇಬರು ಜಾಗೃತಿ ಅಭಿಯಾನ ಹಾಗೂ ಮತದಾರರ ಜಾಗೃತಿ ಮತ್ತು ಸ್ವಚ್ಛತಾ ಅಭಿಯಾನ ನಡೆಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ–ಯಾಗಿ ವಿಜಯಪುರ ಚುನಾವಣಾ ಸಾಕ್ಷರತಾ ಕ್ಲಬ್‌ನ ಜಿಲ್ಲಾ ನೋಡಲ್ ಅಧಿಕಾರಿ ಡಾ. ಶಿವಾನಂದ್ ಜಮಾದಾರ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರಿಗೂ ಮತದಾನದ ಹಕ್ಕು ನೀಡಲಾಗಿದೆ ಎಂದರು. ಅದರಂತೆ ಮತದಾರರ ಜವಾಬ್ದಾರಿಗಳು, ಮತದಾನದ ಪಾರದರ್ಶಕತೆ, ನಾಯಕರ ಹೊಣೆಗಾರಿಕೆ ಚುನಾವಣಾ ಸಾಕ್ಷರತಾ ಕ್ಲಬ್‌ನ ಪರಿಣಾಮಕಾರಿ ಪಾತ್ರದ ಅರಿವನ್ನು ಸಮಗ್ರವಾಗಿ ಮಾಹಿತಿ ನೀಡಿದರು.

ಈ ವೇಳೆ ಬಾಬಾಸಾಹೇಬರ ವಿಚಾರಗಳನ್ನು ಸಾಮಾಜಿಕ ಸಮಾನತೆ, ನ್ಯಾಯ ಮತ್ತು ಶಿಕ್ಷಣದ ಮಹತ್ವವನ್ನು ಹರಡಿಸಲು ಎಲ್ಲ ಸ್ವಯಂಸೇವಕ ವಿದ್ಯಾರ್ಥಿ ವಿದ್ಯಾರ್ಥಿನಿಯರು ಸಂಕಲ್ಪ ಮಾಡಿದರು.

ಈ ಸಂದರ್ಭದಲ್ಲಿ ಎನ್‌ಎಸ್‌ಎಸ್ ಘಟಕ–1 ಮತ್ತು 2 ರ ಕಾರ್ಯಕ್ರಮ ಅಧಿಕಾರಿಗಳಾದ ಡಾ.ಮಿಲನ್ ರಾಠೋಡ್, ಡಾ.ತರನ್ನುಮ್ ಜಬೀನ್ ಖಾನ್, ಎನ್‌ಎಸ್‌ಎಸ್ ಸ್ವಯಂಸೇವಕ ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## 1280 ಕೆಜಿ ಅಕ್ರಮ ಪಡಿತರ ಅಕ್ಕಿ ವಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸರ್ಕಾರದ ವಿವಿಧ ಯೋಜನೆಗಳಡಿ ಹಂಚಲ್ಪಡುವ ಅಕ್ಕಿಯನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದುದನ್ನು ಪತ್ತೆ ಮಾಡಿರುವ ಸಿಂದಗಿ ತಹಸೀಲ್ದಾರರು ಹಾಗೂ ಆಹಾರ ಇಲಾಖೆ ಅಧಿಕಾ–ರಿಗಳು ಜಂಟಿ ದಾಳಿ ನಡೆಸಿ, ಅಕ್ರಮವಾಗಿ ಸಾಗಿಸುತ್ತಿದ್ದ ಅಕ್ಕಿ ಹಾಗೂ ಟಾಟಾ ಏಸ್ ವಾಹನ ವಶಪಡಿಸಿಕೊಂಡಿದ್ದಾರೆ.

ಸಿಂದಗಿ ಪಟ್ಟಣದ ಸೋಂಪುರ ರಸ್ತೆಯಲ್ಲಿ ಟಾಟಾ ಏಸ್ ಗೂಡ್ಸ್ ವಾಹನದಲ್ಲಿ ಅಕ್ರಮವಾಗಿ ಅಕ್ಕಿ ಸಾಗಾಟ ಮಾಡುತ್ತಿರುವ ಸಂದರ್ಭದಲ್ಲಿ ಆಹಾರ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ದಾಳಿ ನಡೆಸಿ ಸುಮಾರು 1280 ಕೆಜಿ ಅಕ್ಕಿ ಹಾಗೂ ವಾಹನ ವಶಪಡಿಸಿಕೊಂಡು ವಾಹನ ಮಾಲೀಕರ ವಿರುದ್ಧ ಸಿಂದಗಿ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ದಾಳಿಯಲ್ಲಿ ಸಿಂದಗಿ ತಹಸೀಲ್ದಾರ್ ಕರೆಪ್ಪ ಎಸ್. ಬೆಳ್ಳಿ, ಆಹಾರ ನಿರೀಕ್ಷಕರಾದ ವಿದ್ಯಾ ಹಿಪ್ಪರಗಿ, ಪ್ರಭುಗೌಡ ಬಿರಾದಾರ ಪಾಲ್ಗೊಂಡಿದ್ದರು ಎಂದು ಆಹಾರ ಇಲಾಖೆಯ ಉಪ ನಿರ್ದೇಶಕ ವಿನಯಕುಮಾರ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐಟಿಐ ಪ್ರವೇಶಕ್ಕೆ ಆನ್ ಲೈನ್ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಬಲೇಶ್ವದ ಸರ್ಕಾರಿ ಕೈಗಾ–ರಿಕಾ ತರಬೇತಿ ಸಂಸ್ಥೆ (ಐಟಿಐ)ಯಲ್ಲಿ 2026ನೇ ಸಾಲಿನ ಶೈಕ್ಷಣಿಕ ಸಾಲಿಗೆ ಮೆರಿಟ್ ಕಮ್ ರಿಸರ್ವೇಷನ್ ಆಧಾ–ರಿತ ಪ್ರವೇಶಕ್ಕೆ ಆನ್ ಲೈನ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಲಭ್ಯವಿರುವ ಎರಡು ವರ್ಷದ ವೃತ್ತಿಗಳಾದ ಎಲೆಕ್ಟ್ರೀಶಿಯನ್, ಎಲೆಕ್ಟ್ರಾನಿಕ್, ಮೆಕ್ಯಾನಿಕ್, ಫಿಟ್ಟರ್, ಅಡ್ವಾನ್ಸ್ಡ್ ಸಿಎನ್ ಸಿ ಮೆಕ್ಯಾನಿಂಗ್ ಟೆಕ್ನಿಶಿಯನ್, ಮೆಕ್ಯಾನಿಕ್ ಎಲೆಕ್ಟ್ರಿಕ್ ವೆಹಿಕಲ್, ಬೇಸಿಕ್ ಡಿಸೈನರ್ ಮತ್ತು ವರ್ಚುವಲ್ ವೆರಿಫೈಯರ್, ಒಂದು ವರ್ಷದ ವೃತ್ತಿಗಳಾದ ವೆಲ್ಡರ್, ಇಂಡಸ್ಟ್ರಿಯಲ್ ರೋಬೋಟಿಕ್ಸ್, ಮತ್ತ ಡಿಜಿಟಲ್ ಮ್ಯಾನ್ಯುಫ್ಯಾಕ್ಚರಿಂಗ್ ಟೆಕ್ನಿಶಿಯನ್, ಮ್ಯಾನ್ಯುಫ್ಯಾಕ್ಚರಿಂಗ್ ಪ್ರೊಸೆಸ್ ಕಂಟ್ರೋಲ್ ಮತ್ತು ಆಟೋಮೇಶನ್, ಆರ್ಟಿಸನ್ ಯೂಸಿಂಗ್ ಅಡ್ವಾನ್ಸ್ಡ್ ಟೂಲ್ಸ್ ಗಳಲ್ಲಿ 10ನೇ ತರಗತಿ ಉತ್ತೀರ್ಣರಾದ ಗ್ರಾಮೀಣ ಪ್ರದೇಶದ ಮಕ್ಕಳು ಪ್ರವೇಶ ಪಡೆಯಬಹುದಾಗಿದೆ. ಆಸಕ್ತ ಅಭ್ಯರ್ಥಿಗಳು ತಿತಿತಿ.cite.karnataka.gov.ಟಿ ನಲ್ಲಿ ಖಾಸಗಿ ನೆಟ್ ಸೆಂಟರ್ ಅಥವಾ ಹತ್ತಿರದ ಸರ್ಕಾರಿ ಸಂಸ್ಥೆಗಳಲ್ಲಿ ತೆರಳಿ ಮೇ 8 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಬಬಲೇಶ್ವರ ಮೊ ಸಂಖ್ಯೆ: 9844793970, 9886591700, 8618365416, 7353695555, 9900627197, 8904416126, 7026084602 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಇತಿಹಾಸ ನಿರ್ಮಿಸಿದ ಶ್ರೀ ವಿಶ್ವಭಾರತಿ ಪಿಯು ಕಾಲೇಜು



■ ಉದಯರಶ್ಮಿ ದಿನಪತ್ರಿಕೆ

ಹೆಚ್ ಡಿ ಕೋಟೆ: ತಾಲೂಕಿನ ಇತಿಹಾಸದಲ್ಲೇ ದ್ವಿತೀಯ ಪಿಯು ಪರೀಕ್ಷೆಯಲ್ಲಿ 45 ವಿದ್ಯಾರ್ಥಿಗಳು ಡಿಸ್ಟಿಂಗ್ಷನ್ ನಲ್ಲಿ ತೇರ್ಗಡೆಯಾಗಿರುವ ಉದಾಹರಣೆ ಯಾವುದಾದರೂ ಶಿಕ್ಷಣ ಸಂಸ್ಥೆಯಿದ್ದರೆ, ಅದು ಶ್ರೀ ವಿಶ್ವಭಾರತಿ ಪಿಯು ಕಾಲೇಜು ಮಾತ್ರ ಎಂದು ವಿಜ್ಞಾನ ವಿಭಾಗದ ಮುಖ್ಯಸ್ಥ ಭರತ್ ಚಾಮರಾಜು ಹೇಳಿದರು.

ಪಟ್ಟಣದ ಶ್ರೀ ವಿಶ್ವಭಾರತಿ ಪಿಯು ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಕಳೆದ ಮೂರು ವರ್ಷಗಳಿಂದಲೂ ನಮ್ಮ ಶಿಕ್ಷಣ ಸಂಸ್ಥೆ ಉತ್ತಮ ಶಿಕ್ಷಣ ನೀಡುತ್ತಾ ಬರುತ್ತಿದೆ. ಈ ಬಾರಿ ದ್ವಿತೀಯ ಪಿಯು ಪರೀಕ್ಷೆಯಲ್ಲಿ 45ಕ್ಕೂ ಹೆಚ್ಚು ವಿದ್ಯಾರ್ಥಿಗಳು 500 ಕ್ಕೂ ಹೆಚ್ಚು ಅಂಕಗಳನ್ನು ಪಡೆದಿದ್ದಾರೆ. 75 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿದ್ದು, ಶೇಕಡಾ 98ರಷ್ಟು ಫಲಿತಾಂಶ ಬಂದಿದೆ. ಈ ಹಿಂದಿನ ಸಾಲಿನಲ್ಲಿ ನಮ್ಮ ಕಾಲೇಜಿನ ವಿದ್ಯಾರ್ಥಿ 572 ಅಂಕ ಪಡೆದಿದ್ದರು. ಈ ಬಾರಿ 579 ಅಂಕ ಬಂದಿದೆ. ಮುಂದಿನ ವರ್ಷ 590 ಅಂಕಗಳ ಗಡಿ ದಾಟುತ್ತೇವೆ.

ಮಾದಾಪುರ ಸರ್ಕಾರಿ ಪ್ರೌಢಶಾಲೆಯಲ್ಲಿ ಎಸ್‌ಎಸ್–ಎಲ್‌ಸಿ ಪೂರ್ಣಗೊಳಿಸಿ ನಮ್ಮ ಕಾಲೇಜಿಗೆ ದಾಖಲಾಗಿದ್ದ ಹುಡುಗ ಗಣಿತದಲ್ಲಿ 100ಕ್ಕೆ 100 ಅಂಕಗಳ ಪಡೆದಿದ್ದಾನೆ. ಕನ್ನಡ ಮಾಧ್ಯಮದಲ್ಲಿ ಓದಿಕೊಂಡು ಬಂದಿದ್ದ ಗೌತಮ್ ಎಂಬ ವಿದ್ಯಾರ್ಥಿ ಕಂಪ್ಯೂಟರ್ ಸೈನ್ಸ್ ನಲ್ಲಿ 100ಕ್ಕೆ 100 ಅಂಕಗಳನ್ನು ಪಡೆದಿದ್ದಾನೆ. ವರ್ಷದಿಂದ ವರ್ಷಕ್ಕೆ ಉತ್ತಮ ಫಲಿತಾಂಶ ಕಾಣುತ್ತಿದ್ದೇವೆ ಎಂದು ಭರತ್ ಚಾಮರಾಜು ಹೇಳಿದರು.

ಭೌತಶಾಸ್ತ್ರ ವಿಭಾಗದ ಉಪನ್ಯಾಸಕರಾದ ಪ್ರದೀಪ್ ಕುಮಾರ್ ಮಾತನಾಡಿದರು.

ದ್ವಿತೀಯ ಪಿಯು ಪರೀಕ್ಷೆಯಲ್ಲಿ ಡಿಸ್ಟಿಂಗ್ ಷನ್ ಪಡೆದ 45 ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ವೇಳೆ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಚಾಮರಾಜು, ಲಯನ್ಸ್ ಕ್ಲಬ್ ಅಧ್ಯಕ್ಷ ಭಾಸ್ಕರ್ ಬೀಚನಹಳ್ಳಿ ,

ಹಿರಿಯ ಉಪನ್ಯಾಸಕ ವಾಸು, ಖಾಸಗಿ ಶಾಲಾ ಕಾಲೇಜು ಶಿಕ್ಷಕ ಉಪನ್ಯಾಸಕರ ಸಂಘದ ಅಧ್ಯಕ್ಷ ಭರತ್ ಚಾಮರಾಜು, ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಪ್ರದೀಪ್ ಕುಮಾರ್ ಸೇರಿದಂತೆ ಹಲವರಿದ್ದರು.




# ಅಂಬೇಡ್ಕರರ ವ್ಯಕ್ತಿತ್ವ ಇಡೀ ಜಗತ್ತಿಗೆ ಮಾದರಿ :ಅಜಮನಿ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಅಂಬೇಡ್ಕರರವರು ನಮ್ಮ ದೇಶದ ಸಂವಿಧಾನವನ್ನು ಕೇವಲ ಪೆನ್ನಿನಿಂದ ಬರೆದಿದ್ದಲ್ಲ. ಬದಲಾಗಿ ಅವರ ದೇಹದ ರಕ್ತದ ಕಣಕಣದಿಂದ ಬರೆದದ್ದು ಎಂದು ದಲಿತ ಸಾಹಿತಿ ಶಿವಪುತ್ರ ಅಜಮನಿ ಅಭಿಪ್ರಾಯ ಪಟ್ಟರು.

ತಾಲೂಕಿನ ದೇವೂರ ಗ್ರಾಮದಲ್ಲಿ ನಡೆದ ಡಾ. ಬಾಬಾಸಾಹೇಬ ಅಂಬೇಡ್ಕರರ 135 ನೇ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಈ ದೇಶದ ಶೋಷಿತರಿಗೆ, ನಿರ್ಗತಿಕ–ರಿಗೆ, ದೀನದಲಿತರಿಗೆ, ಸಾಮಾಜಿಕ ನ್ಯಾಯವನ್ನು ಕೊಡಿಸಲು ದೇಶದಲ್ಲಿ ಸರಿ ಸಮಾನತೆ ತರಲು ತಮ್ಮ ನಾಲ್ಕು ಮಕ್ಕಳನ್ನು ಬಲಿ ಕೊಟ್ಟು, ತಮ್ಮ ಮಡದಿಯನ್ನು ಬಲಿ ಕೊಟ್ಟು, ತಮ್ಮ ಹದಗೆಟ್ಟ ಆರೋಗ್ಯವನ್ನೂ ಲೆಕ್ಕಿಸದೆ ಈ ದೇಶಕ್ಕೆ ಬಹು ದೊಡ್ಡ ತ್ಯಾಗವನ್ನು ಮಾಡಿದ್ದಾರೆ. ಭಾರತೀಯರು ಅವರ ತ್ಯಾಗವನ್ನು ಯಾವ ಕಾಲಕ್ಕೂ ಮರೆಯಬಾರದು ಎಂದರು.

ನಿವೃತ್ತ ಉಪನ್ಯಾಸಕ ಪಿ.ಎಚ್.ಉಪ್ಪಲದಿನ್ನಿ, ಕಂದಾಯ ನಿರೀಕ್ಷಕ ವೆಂಕಟೇಶ ಅಂಬಿಗೇರ, ಹಿರಿಯ ಪತ್ರಕರ್ತ ಪರಶುರಾಮ ಕೊಣ್ಣೂರ, ಡಿ.ಕೆ. ದ್ಯಾವಪ್ಪ ಮತ್ತೀತರರು ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ಸ್ಮರಿಸಿದರು.

ಈ ವೇಳೆ ಮುಖಂಡರಾದ ಸಿದ್ಧಾರ್ಥ ರೂಗಿ, ಪ್ರವೀಣ ಕಟ್ಟಿಮನಿ, ಮುತ್ತಣ್ಣ ಕಟ್ಟಿಮನಿ, ಬಸಂತ ಕಟ್ಟಿಮನಿ, ಹಣಮಂತ ಅಡಿಹಾಳ, ಹಣಮಂತ ಎಮ್ಮೆಟ್ಟಿ, ಸಂಗಪ್ಪ ಚೌರಿ, ಪರಶುರಾಮ ಮಾದರ, ಲವ ಚಲವಾದಿ, ಸಂಗಮೇಶ ಚಲವಾದಿ ಸೇರಿದಂತೆ ಹಲವರು ಇದ್ದರು.

ಇಲಕಲ್ಲನ ಡಯಟ್ ಉಪನ್ಯಾಸಕ ಪರಶುರಾಮ ಚಲವಾದಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕ ಬಿ.ಎಸ್.ಚಲವಾದಿ ನಿರೂಪಿಸಿದರು.

# ಅಂತರ್ಜಲಮಟ್ಟ ಹೆಚ್ಚಿಸಿದ ಕಾಲುವೆ ನೀರು



■ ಉದಯರಶ್ಮಿ ದಿನಪತ್ರಿಕೆ

ಚಿಮ್ಮಡ: ಗ್ರಾಮದ ಮಾರ್ಗವಾಗಿ ಹರಿಯುತ್ತಿರುವ ಘಟಪ್ರಭಾ ಎಡದಂಡೆ ಕಾಲುವೆಗೆ ಪ್ರತಿದಿನ 2400 ಕ್ಯುಸೆಕ್‌ನಂತೆ ನೀರು ಹರಿಸುತ್ತಿರುವದರಿಂದ ಈ ಭಾಗದ ಅಂತರ್ಜಲಮಟ್ಟ ಹೆಚ್ಚಾಗುವ ಮೂಲಕ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ ನಿವಾರಣೆಯಾದಂತಾಗಿದೆ.ಕಳೆದ ಒಂದು ವಾರದಿಂದ ಜಿಎಲ್ಬಿಸಿ ಕಾಲುವೆಯ ನೀರು ಈ ಭಾಗದ ಎರಡು ಬ್ರಹತ್ ಕೆರೆ ಹಾಗೂ ಬಾಂದಾರಗಳಿಗೆ ಹರಿಸಿ ತುಂಬಿಸಲಾಗಿದ್ದ–ರಿಂದ ಬಾವಿ ಬರ್ವೆಲ್‌ಗಳ ಅಂತರ್ಜಲಮಟ್ಟ ಹೆಚ್ಚಿದ್ದು ಈ ಮೊದಲು ಕೇವಲ ಅರ್ಧಘಂಟೆ ಮಾತ್ರ ನೀರು ಪೋರೈಸುತಿದ್ದ ಬರ್ವೆಲ್‌ಗಳೂ ಈಗ ಸತತವಾಗಿ ನೀರು ಕೊಡುತ್ತಿವೆಯಲ್ಲದೇ ರೈತರ ಹೊಲಗಳಲ್ಲಿರುವ ಭಾವಿಗಳ ಜಲಮಟ್ಟವೂ ಗಣನೀಯವಾಗಿ ಹೆಚ್ಚಿದ್ದರಿಂದ ರೈತರು ಹರ್ಷಗೊಂಡು ತಮ್ಮ ಹೊಲ ಗದ್ದೆಗಳನ್ನು ಹದಗೊಳಿಸುವ ಮೂಲಕ ಬಿತ್ತನೆ ಕಾರ್ಯಕ್ಕೆ ಅಣಿಯಾಗಿದ್ದಾರೆ.

ಹನ್ನೊಂದು ದಿನಗಳ ಕಾಲ ಹರಿಸಲಾಗುತ್ತಿರುವ ಈ ಕಾಲುವೆ ನೀರು ಇನ್ನು ಕೇವಲ ನಾಲ್ಕು ದಿನಮಾತ್ರ ಹರಿಯಲಿದ್ದು ತೇರದಾಳ ಮತಕ್ಷೇತ್ರ ವ್ಯಾಪ್ತಿಯ ರೈತರು ಸಾರ್ವಜನಿಕರು ತಮ್ಮ ಭಾಗದ ಕೆರೆ ಬಾಂದಾರಗಳನ್ನು ತುಂಬಿಸಿಕೊಂಡು ಸದ್ಬಳಕೆ ಮಾಡಿಕೊಳ್ಳಬೇಕೆಂದು ಶಾಸಕ ಸಿದ್ದು ಸವದಿ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

# ಸರ್ಕಾರಿ ಪಾಲಿಟೆಕ್ನಿಕ್ ಪ್ರವೇಶಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಎಸ್ಸೆಸ್ಸೆಲ್ಸಿ ಇಲ್ಲವೇ ತತ್ಸಮಾನ ಪರೀಕ್ಷೆ ಪಾಸಾದ ವಿದ್ಯಾರ್ಥಿಗಳಿಂದ 2026–27ನೇ ಸಾಲಿನ ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಕ್ಕೆ ಮೆರಿಟ್ ಹಾಗೂ ರೋಸ್ಟರ್ ಆಧಾ–ರಿತವಾಗಿ ಇಲ್ಲಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್ ಮೂಲಕ ಅರ್ಜಿ ಆಹ್ವಾನಿಸಿದೆ.

ಆಸಕ್ತರು ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಮೇ 2 ರೊಳಗಾಗಿ ಸರಕಾರಿ ಪಾಲಿಟೆಕ್ನಿಕ್ ಕಾಲೇಜ್ ಪ್ರಾಚಾರ್ಯರಿಗೆ ನೇರವಾಗಿ ಸಲ್ಲಿಸಬಹುದಾಗಿದೆ. ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿಯನ್ನು ಮೇ 4 ರಂದು ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು.

ಆಫ್ ಲೈನ್ ಕೌನ್ಸಲಿಂಗ್ ಮೂಲಕ ಸೀಟು ಹಂಚಿಕೆ ಮಾಡಿ, ಸೀಟು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ತಮ್ಮ ಮೂಲ ದಾಖಲೆಗಳು ಮತ್ತು ಪ್ರವೇಶ ಶುಲ್ಕದೊಂದಿಗೆ ಪ್ರವೇಶವನ್ನು ಮೇ 5ರೊಳಗಾಗಿ ಅಂತಿಮವಾಗಿ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ bidutt dte-tech.karnataka.gov.in ಹಾಗೂ dtek.karnataka.gov.in ವೆಬ್ ಸೈಟ್ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR